ಸಂಪುಟ : 10 ಸಂಚಿಕೆ: 62 ಪುಟ : 4+2 ಬೆಲೆ: 3.00 ರವಿವಾರ ಎಪ್ರಿಲ್ 6 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 62 Pages : 4+2 Price : 3.00 Sunday April 6 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಎಪ್ರಿಲ್:06 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 20, 21, 23 ಗಣಪತಿ ಗುಡಿ, ಜಂತ್ಲಿಯವರ ಲೈನ್, ಕುಂಬಾರ ದ್ಯಾಮವ್ವನ ಕಟ್ಟಿ, ಪಡಗದ ಭಾಗ-1, ಭಾಗ-2, ಸಿ.ಟಿ ಹಾಲ್, ಭಾಗ-1 ಭಾಗ-2 ಹನುಮಾನಗರಡಿ, ವಿಭೂತಿ ಓಣಿ, ದ್ರೌಪತಿಬಾಯಿ ಲೈನ್, ಕೆರಕಲ್‌ಮಟ್ಟಿ ಲೈನ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 22 ಗಿರಣಿ ಲೈನ್, ಈಶ್ವರಗುಡಿ, ದಖನಿಯವರ ಲೈನ್, ಉಳಿದ ಭಾಗ, ಮಸೂತಿಯ ಕೆಲವು ಭಾಗಗಳು,

ವಾರ್ಡ್ ನಂ. 3ರಲ್ಲಿ ಕುಂಬಾರ ಓಣಿ, ಅಯ್ಯಪ್ಪಜ್ಜನ ಗದ್ದುಗೆ, ರಾಜಾಜಿ ರಸ್ತೆ ,ಮಿಸ್ಕಿನ್, ಹುಯಿಲಗೋಳ ಮಸೂತಿ, ಕೆ.ಇ.ಬಿ. ಒನಕಿ ದವಾಖಾನೆ, ಹುಯಿಲಗೋಳ ರಸ್ತೆ, ಎಡಭಾಗ, 4 ಭಾಗಗಳು ವಾರ್ಡ್ ನಂ. 27, 30 ರಲ್ಲಿ ಕಾಶಿ ವಿಶ್ವನಾಥ ನಗರ, ಅಸೂಟಿಯವರ, ದುರಗಮ್ಮನ ಗುಡಿ, ಕಣವಿ ಪ್ಲಾಟ್ ಮಾಳಕೋಟೆಶ್ವರ ಗುಡಿ, ವಿ.ಆರ್.ಎಲ್ ಆಫೀಸ್ ಲೈನ್, ಸಂಕಣ್ಣವರ ಲೇಔಟ್, ಪಾಶಿಯವರ, ಕೇಶವನಗರ, ಪುಟ್ಟರಾಜ ನಗರ ಉಳಿದ ಭಾಗಗಳು, ವಾರ್ಡ್ ನಂ. 12, 10 ನಂಬರ ಶಾಲೆ, ಕರಿಯಮ್ಮನಕಲ್ಲು ಬಡಾವಣೆ, ಗಣಪತಿ ಕಟ್ಟಿ ಲೈನ್, ಗಾಣಗೇರ ಭವನ, ಮಸೂತಿ ಲೈನ್, ಚರ್ಚ್ ಲೈನ್, ಉಳಿದ ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಿಯಲ್ ಎಸ್ಟೇಟ್ ಸಂಘದ ಉದ್ಘಾಟನೆ ಇಂದು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಶ್ರೀ ಸೋಮೇಶ್ವರ ರಿಯಲ್ ಎಸ್ಟೇಟ್ ಸಂಘದ ಉದ್ಘಾಟನೆ, ಪದಾಧಿಕಾರಿಗಳ ಪದಗ್ರಹಣ ಹಾಗೂ ಸನ್ಮಾನ ಸಮಾರಂಭ ಎಪ್ರಿಲ್ 6ರಂದು ಬೆಳಿಗ್ಗೆ 10.30ಕ್ಕೆ ಪಟ್ಟಣದ ಬಿಸಿಎನ್ ಪಾಲಿಟೆಕ್ನಿಕ್ ಕಾಲೇಜು ಸಭಾಭವನದಲ್ಲಿ ನಡೆಯಲಿದೆ.ಶಾಸಕ ಡಾ. ಚಂದ್ರು ಲಮಾಣಿ ಉದ್ಘಾಟಿಸುವರು. ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಉದ್ಯಮಿ ಬಿ.ಸಿ. ನೆಲವಿಗಿ ಉಪಸ್ಥಿತರಿರುವರು. ಅಧ್ಯಕ್ಷತೆಯನ್ನು ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ ವಹಿಸುವರು. ಅತಿಥಿಗಳಾಗಿ ಆನಂದ ಗಡ್ಡದೇವರಮಠ, ಸುಜಾತಾ ದೊಡ್ಡಮನಿ, ಬಸವರಾಜ ಹತ್ತಿಕಾಳ, ಪುರಸಭೆ ಉಪಾಧ್ಯಕ್ಷ ಫಿರ್ದೋಶ್ ಆಡೂರ, ವಿ.ಜಿ. ಪಡಗೇರಿ, ಮಂಜುನಾಥ. ಮಾಗಡಿ, ಎಂ.ಎಂ. ಗದಗ, ಸುರೇಶ ನಂದೆಣ್ಣವರ, ಹರೀಶ ಲಕ್ಷ್ಮೇಶ್ವರ ಸೇರಿದಂತೆ ಸಂಘದ ನೂತನ ಪದಾಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಸಂಘದ ಪ್ರ.ಕಾರ್ಯದರ್ಶಿ ಸುರೇಶ ಹಿರೇಮನಿ ತಿಳಿಸಿದ್ದಾರೆ.

### ರೇಣುಕಾ ಯಲ್ಲಮ್ಮ ಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯ ಸಭೆಯಲ್ಲಿ ಸಚಿವ ಎಚ್.ಕೆ. ಪಾಟೀಲ

# ಭಕ್ತರ ಅನುಕೂಲಕ್ಕಾಗಿ ಸಮಗ್ರ ಯೋಜನೆ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಉತ್ತರ ಕರ್ನಾಟಕದ ಪ್ರಮುಖ ಶ್ರದ್ಧಾ-ಕೇಂದ್ರ ಸವದತ್ತಿ ಯಲ್ಲಮ್ಮನ ಗುಡ್ಡದಲ್ಲಿ ಭಕ್ತರ ಅನುಕೂಲಕ್ಕಾಗಿ ಮೂಲಸೌಕರ್ಯ ಕಲ್ಪಿಸುವ ಸಮಗ್ರ ಯೋಜನೆ ಸಿದ್ಧಗೊಂಡಿದ್ದು, ಕಾಲಮಿತಿಯಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ಬೆಂಗಳೂರಿನಲ್ಲಿ ನಡೆದ ರೇಣುಕಾ ಯಲ್ಲಮ್ಮ ಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯ ರಾಜ್ಯಮಟ್ಟದ ಸಮಿತಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಪ್ರಸ್ತುತ ಸರ್ಕಾರ ಅಧಿಕಾರಕ್ಕೆ ಬಂದಮೇಲೆ ಸವದತ್ತಿಯಲ್ಲಮ್ಮನ ಗುಡ್ಡದಲ್ಲಿ ಸಮಗ್ರ ಅಭಿವೃದ್ಧಿಯ ಬದ್ಧತೆಯನ್ನು ಪ್ರಕಟಿಸಲಾಗಿತ್ತು. ಭಾರತ ಹುಣ್ಣಿಮೆಯ ಸಂದರ್ಭದಲ್ಲಿ ಸವದತ್ತಿ ಯಲ್ಲಮ್ಮನ ಗುಡ್ಡದಲ್ಲಿ ಬದಲಾವಣೆ ಕಾಣುತ್ತೇವೆ ಎಂಬುದು ಭಕ್ತರಿಗೆ



ವಿಧಿತವಾಯಿತು ಎಂದು ಸಚಿವರು ಬೆಳಗಾವಿ ಜಿಲ್ಲಾ ಆಡಳಿತಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ವಿಶಾಲವಾದ ಪಾರ್ಕಿಂಗ್ ವ್ಯವಸ್ಥೆ, ತಿರುಪತಿ ಮಾದರಿಯಲ್ಲಿ ಕ್ಯೂ ಕಾಂಪ್ಲೆಕ್ಸ್, ಉಳಿದುಕೊಳ್ಳಲು ವ್ಯವಸ್ಥೆ, ಚಕ್ಕಡಿ ಕಟ್ಟಿ-ಕೊಂಡು ಬರುವವರಿಗೆ ಪಶು ಆಹಾರಕ್ಕಾಗಿ

> ಕಳೆದ ಭಾರತ ಹುಣ್ಣಿಮೆ ಸಂದರ್ಭದಲ್ಲಿ 3 ಲಕ್ಷ ಭಕ್ತರಿಗೆ ಮಜ್ಜಿಗೆ ದಾಸೋಹ ಕೈಗೊಂಡಿದ್ದು, ಭಕ್ತರನ್ನು ಸರ್ಕಾರ ಕಾಳಜಿ ಮಾಡುತ್ತಿದೆ ಎಂಬ ಭಾವನೆ ಮೂಡಿದೆ.
>
> ಈ ಸಲ ಭಾರತ ಹುಣ್ಣಿಮೆಯ ಸಂದರ್ಭದಲ್ಲಿ ಎಲ್.ಇ.ಡಿ ಸ್ಕ್ರೀನ್‌ಳನ್ನು ಅಳವಡಿಸಿದ್ದರಿಂದ ಭಕ್ತಾದಿಗಳು ಆ ಸ್ಕ್ರೀನ್‌ಳಿಗೆ ಪೂಜೆ ಮಾಡಿದ್ದು ಸಹ ಕಂಡುಬಂದಿತು ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಮೇವಿನ ದಾಸೋಹ, ರಿಂಗ್ ರಸ್ತೆ, ವಯಸ್ಸಾದವರಿಗೆ ದರ್ಶನಕ್ಕೆ ವ್ಯವಸ್ಥೆ ಮುಂತಾದವು ಸೇರಿದಂತೆ ಎಲ್ಲಾ ಮೂಲಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, ಸವದತ್ತಿ ಶಾಸಕ ವಿಶ್ವಾಸ ವೈದ್ಯ, ಪ್ರವಾಸೋದ್ಯಮ ಕಾರ್ಯದರ್ಶಿ ಸಲ್ಮಾ ಫಾಹೀಮ್, ಧಾರ್ಮಿಕ ದತ್ತಿ ಇಲಾಖೆ ಆಯುಕ್ತ ಟಿ. ವೆಂಕಟೇಶ, ಬೆಳಗಾವಿ ಜಿಲ್ಲಾಧಿಕಾರಿ ರೋಶನ್ ಮುಂತಾದ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

### ಬಾಬು ಜಗಜೀವನರಾಂ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಅಭಿಮತ

# ಬಾಬುಜೀ ಚಿಂತನೆಗಳು ಸದಾ ಸ್ಮರಣೀಯ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಷ್ಟ್ರದ ಸೇವೆಗಾಗಿ ಬದುಕನ್ನೇ ಮೀಸಲಿಟ್ಟ ಹಸಿರು ಕ್ರಾಂತಿ ಮತ್ತು ಸಮಾನತೆಯ ಹರಿಕಾರ, ಉಪ ಪ್ರಧಾನಮಂತ್ರಿಗಳಾಗಿದ್ದ ಡಾ. ಬಾಬು ಜಗಜೀವನರಾಂ ಅವರ ಆದರ್ಶ, ಚಿಂತನೆಗಳು ಸದಾ ಸ್ಮರಣೀಯ. ಅವರ ಶ್ರೇಷ್ಠ ವ್ಯಕ್ತಿತ್ವ ಹಾಗೂ ಜೀವನ ಚರಿತ್ರೆಯನ್ನು ತಿಳಿದು ಗೌರವದಿಂದ ಸ್ಮರಿಸುವುದು ಎಲ್ಲರ ಕರ್ತವ್ಯವಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಶನಿವಾರ ಬಾಬು ಜಗಜೀವನರಾಂ ಅವರ 118ನೇ ಜನ್ಮದಿನಾಚರಣೆ/ಸಮತಾ ದಿನ ಆಚರಣೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಅವರು ದೇಶದ ಕಟ್ಟಕಡೆಯ ಸಮುದಾಯದ ಹಿತರಕ್ಷಣೆಗಾಗಿ ಶ್ರಮಿಸಿದವರು. ಕಾರ್ಮಿಕ ಸಚಿವರಾಗಿದ್ದಾಗ ದೇಶದ ಕಾರ್ಮಿಕರ ಕಾಯ್ದೆಗಳ ಶಿಲ್ಪಿ ಎಂಬ ಗೌರವಕ್ಕೆ ಪಾತ್ರರಾದರು. ಸಂಪರ್ಕ



ಖಾತೆ ಸಚಿವರಾಗಿದ್ದ ವೇಳೆ ವಿಮಾನಯಾನ ರಾಷ್ಟ್ರೀಕರಣ, ಅಂಚೆ ಸೇವೆ ಬಲಿಷ್ಠಗೊಳಿಸಿದರು. ರೇಲ್ವೆ ಸಚಿವರಾಗಿದ್ದ ವೇಳೆ ರೇಲ್ವೆ ವಿದ್ಯುದ್ದೀಕರಣಗೊಳಿಸಿದರು. ಭಾರತ ಭೀಕರ ಬರಗಾಲಕ್ಕೆ ತುತ್ತಾದಾಗ ಕೃಷಿ ಸಚಿವರಾಗಿದ್ದ ಬಾಬೂಜಿ ದೇಶವು ಆಹಾರೋತ್ಪಾದನೆಯಲ್ಲಿ ಸ್ವಾವಲಂಬನೆ ಸಾಧಿಸಲು ವೈಜ್ಞಾನಿಕ ಕಾರ್ಯಕ್ರಮ ರೂಪಿಸಿ 'ಹಸಿರು ಕ್ರಾಂತಿಯ ಹರಿಕಾರ'ರೆಂದು ಕರೆಸಿಕೊಂಡರು. ಅವರ ಜನ್ಮದಿನವನ್ನೀಗ 'ಸಮತಾ ದಿನ'ವಾಗಿ ಆಚರಿಸಲಾಗುತ್ತಿದೆ ಎಂದರು.

ಈ ವೇಳೆ ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಗೋಪಾಲ

> ತಹಸೀಲ್ದಾರ ವಾಸುದೇವ ಸ್ವಾಮಿ ಮಾತನಾಡಿ, ಬಾಬು ಜಗಜೀವನ್‌ರಾಂ ಅವರು ತಮ್ಮ ಆಡಳಿತ ಅವಧಿಯಲ್ಲಿ ಮಾಡಿದ ದೇಶ ಸೇವೆ ಅವರನ್ನು ಸದಾ ಸ್ಮರಿಸುವಂತೆ ಮಾಡಿದೆ. ಇಂತಹ ಮಹಾನ್ ನಾಯಕರ ಜೀವನ ಸಾಧನೆ ಮತ್ತು ಆಡಳಿತ ವೈಖರಿ ಸಮಾಜಕ್ಕೆ ಪ್ರೇರಣೆಯಾಗಿದೆ ಎಂದರು.

ಲಮಾಣಿ, ಮುಖ್ಯಾಧಿಕಾರಿ ಮಹೇಶ ಹಡಪದ, ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ಹೆಸ್ಕಾಂ ಅಧಿಕಾರಿ ಆಂಜನಪ್ಪ, ಫಕ್ಕಿರೇಶ ಮ್ಯಾಟಣ್ಣವರ, ಅಮರೇಶ ತೆಂಬದಮನಿ, ರಾಜು ಓಲೇಕಾರ, ಅನಿಲ ಮುಳಗುಂದ, ನಾಗರಾಜ ದೊಡ್ಡಮನಿ, ಕೆ.ಓ. ಹುಲಿಕಟ್ಟಿ, ರಂಗಣ್ಣ ಬದಿ, ಸುರೇಶ ಬೀರಣ್ಣವರ, ಫಕ್ಕಿರೇಶ ಭಜಕ್ಕನವರ, ಜಗದೀಶ ಹುಲಿಗೆಮ್ಮನವರ, ಮಂಜುನಾಥ ರಾಮಗೇರಿ, ಟಾಕಪ್ಪ ಪೂಜಾರ, ಹಜರೇಸಾಬ ಅರ್ಕಸಾಲಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಇದ್ದರು.

## ಬೆಲೆ ಏರಿಕೆ ವಿರೋಧಿಸಿ ಬಿಜೆಪಿ ಪ್ರತಿಭಟನೆ




**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಕಾಂಗ್ರೆಸ್ ಸರಕಾರವು ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡುತ್ತಿರುವುದನ್ನು ಖಂಡಿಸಿ ಶಾಸಕ ಡಾ. ಚಂದ್ರು ಲಮಾಣಿ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಪಟ್ಟಣದ ಶ್ರೀ ಹನುಮಂತ ದೇವರ ದೇವಸ್ಥಾನದಿಂದ ಬೃಹತ್ ಪ್ರತಿಭಟನೆ ನಡೆಸಿ ಟೈರ್‌ಗಳಿಗೆ ಬೆಂಕಿ ಹಚ್ಚಿ ಸರಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಕಾಂಗ್ರೆಸ್ ಸರಕಾರದ ಉಚಿತ ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯದ ಬಡಜನತೆಗೆ ಹಾಗೂ ಅರ್ಹ ಫಲಾನುಭವಿಗಳಿಗೆ ಅನುಕೂಲ ಕಲ್ಪಿಸಲಾಗಿದೆ ಎಂದು ಹೇಳುತ್ತ ಶ್ರೀಸಾಮಾನ್ಯರಿಗೆ ಬೆಲೆ ಏರಿಕೆ ಮೂಲಕ ಮೋಸ ಮಾಡುತ್ತಿದೆ. ನಿರಂತರವಾಗಿ ಬಸ್, ವಿದ್ಯುತ್, ಹಾಲು, ಮೊಸಲು, ತರಕಾರಿ, ಪೆಟ್ರೋಲ್, ಡೀಸೆಲ್, ಬಿತ್ತನೆ ಬೀಜ, ಅಬಕಾರಿ ಸುಂಕ, ಇಂಜಿನಿಯರಿಂಗ್ ಸೀಟುಗಳ ಶುಲ್ಕ ಮುಂತಾದವುಗಳ ಬೆಲೆ ಹೆಚ್ಚಳ ಮಾಡಿ ಶಾಕ್ ನೀಡಿದೆ ಎಂದರು.

ಬಿಜೆಪಿ ತಾಲೂಕಾಧ್ಯಕ್ಷ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಫಕ್ಕಿರೇಶ ರಟ್ಟಿಹಳ್ಳಿ, ನಾಗರಾಜ ಲಕ್ಕುಂಡಿ, ನಾಗರಾಜ ಕುಲಕರ್ಣಿ, ತಿಮ್ಮರಡ್ಡಿ ಮರಡ್ಡಿ, ಮೋಹನ್ ಗುತ್ತೆಮ್ಮನವರ, ಬಿ.ಡಿ. ಪಲ್ಲೇದ, ಸಂತೋಷ ಓಬಾಜಿ, ಹಾಲಪ್ಪ ಸೂರಣಗಿ, ನಂದಾ ಪಲ್ಲೇದ ಮಾತನಾಡಿದರು.

ಮುಖಂಡ ಜಾನು ಲಮಾಣಿ, ಅಶೋಕ ವರವಿ, ಬಸವರಾಜ ಪೂಜಾರ, ತಿಪ್ಪಣ್ಣ ಲಮಾಣಿ, ಪ್ರವೀಣಗೌಡ ಪಾಟೀಲ, ಯಲ್ಲಪ್ಪ ಇಂಗಳಗಿ, ಮಹೇಶ ಬಡ್ನಿ, ಪರಶುರಾಮ ಡೊಂಕಬಳ್ಳಿ, ಬಸವರಾಜ ವಡವಿ, ಸಂದೇಶ ಗಾಣಗೇರ, ಶಿವಣ್ಣ ಲಮಾಣಿ, ಬಸವರಾಜ ನಾಯ್ಕರ್, ಬಸವರಾಜ ತುಳಿ ಸೇರಿದಂತೆ ಅನೇಕರು ಪ್ರತಿಭಟನೆಯಲ್ಲಿ ಇದ್ದರು. ಪಿಎಸ್‌ಐ ಚನ್ನಯ್ಯ ದೇವೂರ ಹಾಗೂ ಸಿಬ್ಬಂದಿಗಳು ಸೂಕ್ತ ಬಂದೋಬಸ್ತ್ ಕೈಗೊಂಡಿದ್ದರು.

### ಪುರಸಭೆ, ಕರ್ನಾಟಕ ಕೆರೆ ಸಂರಕ್ಷಣೆ-ಅಭಿವೃದ್ಧಿ ಪ್ರಾಧಿಕಾರದಿಂದ ಸ್ಥಳ ಸಮೀಕ್ಷೆ

# ಇಟ್ಟಿಗೆರೆ ಅಭಿವೃದ್ಧಿಗೆ ಕಾಲ ಸನ್ನಿಹಿತ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಲಕ್ಷ್ಮೇಶ್ವರ ಪಟ್ಟಣದ ಪಾಳಾ-ಬಾದಾಮಿ ರಾಜ್ಯ ಹೆದ್ದಾರಿಗೆ ಹೊಂದಿಕೊಂಡಿರುವ ಇಟ್ಟಿಗೆರೆ ಅಭಿವೃದ್ಧಿಯಾಗಬೇಕು ಎಂಬ ಹಲವಾರು ವರ್ಷಗಳ ಕೂಗಿಗೆ ಪುರಸಭೆ ಈಗ ಕಿವಿಯಾಗಿದ್ದು, ಅಭಿವೃದ್ಧಿ ಕಾಲ ಸನ್ನಿಹಿತವಾಗಿದೆ. ಸದ್ಯ ಪಟ್ಟಣದ ಹೃದಯ ಭಾಗದಲ್ಲಿಯೇ ಇರುವ 12 ಎಕರೆ 30 ಗುಂಟೆ ಇಟ್ಟಿಗೆರೆ ಪಟ್ಟಣದ ಜನರ ಜೀವನಾಡಿಯಾಗಿದೆ. ತಾಲೂಕಾ ಕೇಂದ್ರವಾದ ಲಕ್ಷ್ಮೇಶ್ವರದಲ್ಲಿರುವುದು ಕೇವಲ 1 ಕೆರೆ ಮಾತ್ರ. ಈ ಕೆರೆ ಸಂರಕ್ಷಣೆಯಾಗದಿದ್ದರೆ ಮುಂದೊಂದು ದಿನ ಲಕ್ಷ್ಮೇಶ್ವರ ಕೆರೆ ಮುಕ್ತ ಪಟ್ಟಣವಾಗಲಿದೆ ಎಂಬ ಸತ್ಯ ಎಲ್ಲರಿಗೂ ಗೊತ್ತಿದೆ. ಅಭಿವೃದ್ಧಿ ಕಾಣದ್ದರಿಂದ ಮಳೆಗಾಲದಲ್ಲಿ ಕೆರೆ ತುಂಬಿದರೆ ಕೆರೆ ಅಂಚಿನ ನಿವಾಸಿಗಳ ಗೋಳು ಹೇಳತೀರದಾಗಿತ್ತು. ಆದಾಗ್ಯೂ ಸಂಬಂಧಪಟ್ಟ ಪುರಸಭೆ, ಜನಪ್ರತಿನಿಧಿಗಳ ನಿರ್ಲಕ್ಷದಿಂದ ಕೆರೆ ಪ್ರಾಂಗಣ ಬಯಲು ಶೌಚ, ತ್ಯಾಜ್ಯ ವಿಲೇವಾರಿ ತಾಣವಾಗಿದೆ. ಕೆರೆಗೆ ಹರಿದು ಬರುವ ಮಳೆ ನೀರಿನ ಮಾರ್ಗಗಳು ಮುಚ್ಚಿದ್ದು, ಕೆರೆ ನೀರಿಗೆ ಕೇವಲ ಚರಂಡಿ ನೀರು, ಗಲೀಜು ಯಥೇಚ್ಛವಾಗಿ ಹರಿದು ಬಂದು ಸೇರುತ್ತಾ ಕೆರೆ ರೋಗಗ್ರಸ್ಥವಾಗಿದೆ. ಈ ಕೆರೆ ಅಭಿವೃದ್ಧಿಯಾಗಬೇಕು ಎಂಬುದು ಎಲ್ಲರ ಹೆಬ್ಬಯಕೆಯಾಗಿತ್ತು.



> ಪಟ್ಟಣದಲ್ಲಿನ ಬೋರ್‌ವೆಲ್, ಬಾವಿ ಸೇರಿ ಜಲಮೂಲಗಳಿಗೆ ಇಟ್ಟಿಗೆರೆ ಅಂತರ್ಜಲ ಮೂಲಾಧಾರವಾಗಿದೆ. ಕೆರೆಗೆ ಚರಂಡಿ ನೀರು ಸೇರಬಾರದು. ಮಳೆ ನೀರು ಸಂಗ್ರಹದಿಂದ ಕೆರೆ ಸಮೃದ್ಧವಾಗಿ ತುಂಬಿ ಜನ-ಜಾನುವಾರು, ಕುರಿ-ಮೇಕೆ ಮತ್ತು ಪಕ್ಷಿಗಳ ದಾಹ ನೀಗಬೇಕು. ಅಲ್ಲದೇ ತುಂಗಭದ್ರಾ ನದಿಯಿಂದ ಕೆರೆ ತುಂಬಿಸುವ ಯೋಜನೆಯಲ್ಲಿ ಈ ಕೆರೆಯೂ ಸೇರಿದೆ. ಅಭಿವೃದ್ಧಿ ಪ್ರಾಧಿಕಾರದಿಂದ ಅಭಿವೃದ್ಧಿ ಕಾಮಗಾರಿ ಸದ್ಯದಲ್ಲಿಯೇ ಕೈಗೊಳ್ಳಲಾಗುತ್ತಿದೆ. ಕೆರೆ ಹೂಳೆತ್ತಲು ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಸಹಕಾರ ಕೋರಿದ್ದು, ಅವರೂ ಒಪ್ಪಿಗೆ ಸೂಚಿಸಿದ್ದಾರೆ.
>
> **– ಮಹೇಶ ಹಡಪದ.**
> **ಪುರಸಭೆ ಮುಖ್ಯಾಧಿಕಾರಿ.**

ಪತ್ರಿಕೆಯೂ ಈ ಬಗ್ಗೆ ಅನೇಕ ಬಾರಿ ಗಮನಾರ್ಹ ವರದಿ ಪ್ರಕಟಿಸಿತ್ತು. ಈ ನಿಟ್ಟಿನಲ್ಲಿ ಪುರಸಭೆಯವರು ಸಂಗ್ರಹವಾದ ಕೆರೆ ಅಭಿವೃದ್ಧಿ ಶುಲ್ಕ 56 ಲಕ್ಷ ರೂ ಅನುದಾನಲ್ಲಿ ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದಿಂದ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಶನಿವಾರ ಪ್ರಾಧಿಕಾರವು ಪುರಸಭೆಯವರೊಂದಿಗೆ ಸೇರಿ ಕೆರೆ ಸರ್ವೆ, ಪರಿಶೀಲನೆ ಮಾಡಿರುವುದು ನಾಗರಿಕರಲ್ಲಿ ಹರ್ಷ ಮೂಡಿಸಿದೆ. ಈ ವೇಳೆ ಮಾತನಾಡಿದ ಪ್ರಾಧಿಕಾರದ ಇಂಜಿನಿಯರ್ ರಫೀ, ಒಟ್ಟು ಕೆರೆ ಪ್ರದೇಶದ ಸರ್ವೆ ಮಾಡಿ, ಒತ್ತುವರಿ ತೆರವುಗೊಳಿಸಲಾಗುವುದು. ಚರಂಡಿ ನೀರು ಸೇರುವ ಮಾರ್ಗಕ್ಕೆ ಪರ್ಯಾಯ ವ್ಯವಸ್ಥೆ ಮಾಡಿ ಮಳೆ ನೀರು ಮಾತ್ರ ಹರಿದು ಬರುವಂತೆ ಸುತ್ತಲೂ 3 ಮೀಟರ್ ಎತ್ತರದ ಬಂಡಿಂಗ್ ನಿರ್ಮಾಣ ಮಾಡಲಾಗುವುದು. ಪ್ರಸ್ತುತ ಕೆರೆಯಲ್ಲಿ ಸುಮಾರು 83 ಮಿಲಿಯನ್ ಲೀಟರ್ ನೀರು ನಿಲ್ಲುವ ಸಾಮರ್ಥ್ಯವಿದೆ. ಆದರೆ ಈಗಾಗಲೇ ಅವೈಜ್ಞಾನಿಕವಾಗಿ ಕೈಗೊಂಡಿರುವ ಕಾಮಗಾರಿ, ಒತ್ತುವರಿ ತೆರವುಗೊಳಿಸಿದಲ್ಲಿ ಸುಮಾರು 2 ಎಕರೆ ಜಮೀನು ಕೆರೆಗೆ ಸಿಗುತ್ತದೆ. ನೀರು ನಿಲ್ಲುವ ಪ್ರಮಾಣ 100 ಮಿಲಿಯನ್ ಲೀಟರ್ ಆಗಲಿದೆ ಎಂದರು. ಈ ವೇಳೆ ಶಂಕರ ಬ್ಯಾಡಗಿ, ಮಹೇಶ ಇದ್ದರು.



## ಸಂಪಾದಕೀಯ

# ಮತ್ತೊಮ್ಮೆ ಮೀಸಲಾತಿ ಮಾತು

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಮೀಸಲಾತಿ ವಿಷಯ ಪದೇಪದೇ ಚರ್ಚೆಗೆ ಬರುತ್ತಿದೆ. ಮುಖ್ಯವಾಗಿ ಒಳ ಮೀಸಲಾತಿ ವಿಷಯ ಮತ್ತೊಮ್ಮೆ ಸದ್ದು ಮಾಡಿದ್ದು, ಯಾರೇ ವಿರೋಧ ಮಾಡಿದರು ಒಳ ಮೀಸಲಾತಿ ಜಾರಿಗೊಳಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಹಸಿರು ಕ್ರಾಂತಿಯ ಹರಿಕಾರ ಡಾಕ್ಟರ್ ಬಾಬು ಜಗಜೀವನ್ ರಾಮ್ ಅವರ ಜಯಂತಿ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಾತಿ ವ್ಯವಸ್ಥೆಯನ್ನ ನಾವು ತಂದಿಲ್ಲ. ಆದರೆ ಜಾತಿಯ ಅಸಮಾನತೆಗೆ ಬಲಿಯಾದವರಿಗೆ ಸಮಾನ ಅವಕಾಶ ನೀಡಲು ಈ ಒಳ ಮೀಸಲಾತಿ ಜಾರಿ ಅತ್ಯವಶ್ಯಕವಾಗಿದೆ ಎಂದು ಪ್ರತಿಪಾದಿಸಿದ್ದಾರೆ.

ಮತ್ತೊಂದೆಡೆ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹೊರಗುತ್ತಿಗೆ ನೇಮಕಾತಿಯಲ್ಲೂ ಮೀಸಲಾತಿ ನಿಯಮ ಅನ್ವಯಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಿತ್ತು. ಈಗ ಅಧಿಕೃತವಾಗಿ ಸರ್ಕಾರದ ಅಧಿಸೂಚನೆಯೂ ಪ್ರಕಟಗೊಂಡಿದ್ದು, ಉದ್ಯೋಗ ಆಕಾಂಕ್ಷಿಗಳಲ್ಲಿ ಭರವಸೆ ಮೂಡಿಸಿದೆ.

ಸರ್ಕಾರ ಒಳ ಮೀಸಲಾತಿ ಜಾರಿಗೊಳಿಸುವ ವಿಷಯದಲ್ಲಿ ಪ್ರದರ್ಶಿಸಿದ ಗಟ್ಟಿತನವನ್ನು ಜಾತಿ ಜನಗಣತಿ ವರದಿ ಬಹಿರಂಗಪಡಿಸುವಲ್ಲಿಯೂ ತೋರಬೇಕು. ಶೋಷಿತ ಸಮುದಾಯಗಳಿಗೆ ಮೀಸಲಾತಿ ನೀಡುವಂತಹ ನಿರ್ಧಾರ ಸ್ವಾಗತಾರ್ಹ. ಆದರೆ ಶೋಷಿತ ಸಮುದಾಯಗಳ ಜನಸಂಖ್ಯೆ ಅರಿಯದೆ ಮೀಸಲಾತಿ ಕಲ್ಪಿಸುವುದು ಕೂಡ ಅಷ್ಟೊಂದು ಸಮಂಜಸ ಅಲ್ಲ.

ಹೀಗಾಗಿ ಕನಿಷ್ಠ ಪಕ್ಷ ಸರ್ಕಾರ ಶೋಷಿತ ಸಮುದಾಯಗಳ ಜಾತಿ ಜನಗಣತಿಯನ್ನಾದರೂ ನಡೆಸಿದರೆ, ಒಳ ಮೀಸಲಾತಿ ಜಾರಿ ಮತ್ತಷ್ಟು ಅರ್ಥಪೂರ್ಣವಾಗುತ್ತದೆ.

## ನಿಧನ



**ಮಲ್ಲಪ್ಪ ಮಂಜಪ್ಪ ಆಡಕಾವು**

ಅಣ್ಣಿಗೇರಿ: ಪಟ್ಟಣದ ವಿದ್ಯಾನಗರದ (ಜಾಡಗೇರಿ ಓಣಿಯ ) ನಿವಾಸಿ ಮಲ್ಲಪ್ಪ ಮಂಜಪ್ಪ ಆಡಕಾವು (77) ಶನಿವಾರ ನಿಧನರಾದರು. ಮೃತರಿಗೆ ಪತ್ನಿ, ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವಿದೆ.

ಮೃತರ ಅಂತ್ಯಕ್ರಿಯೆ ರವಿವಾರ ಮಧ್ಯಾಹ್ನ 12 ಗಂಟೆಗೆ ಕೋಳಿವಾಡ ರಸ್ತೆಯ ಹಾಲುಮತ ರುದ್ರಭೂಮಿಯಲ್ಲಿ ಜರಗಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

### ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು


# ಸರ್ವ ಧರ್ಮಗಳ ಸಂದೇಶ ಒಂದೇ

■ ವಿಜಯಸಾಕ್ಷಿ ಸುದ್ದಿ, ಗದಗ

ಯುಗಾದಿ ಎಂದರೆ ಸಂಭ್ರಮ. ಯುಗಾದಿ ಭಾರತೀಯ ಪರಂಪರೆಯಲ್ಲಿ ಹೊಸವರ್ಷ. ಯುಗಾದಿ ಮತ್ತು ರಂಜಾನ್ ಎರಡೂ ಹಬ್ಬಗಳು ಶಾಂತಿಯ ಸಂಕೇತ. ಸರ್ವಧರ್ಮಗಳ ಭಾವ, ಸಂದೇಶ ಒಂದೇ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2739ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ರಂಜಾನ್ ಡೇ ಆಫ್ ಜಡ್ಜ್‌ಮೆಂಟ್ ಅದು ನ್ಯಾಯದ ದಿನ. ಒಳ್ಳೆಯದನ್ನೆ ಮಾಡು, ಕೆಟ್ಟದನ್ನು ಮಾಡಬೇಡ ಎಂದು ಸಾರುತ್ತದೆ. ಸಾಮರಸ್ಯದ ಸೇತುವೆ ಕಟ್ಟಿಕೊಡುತ್ತದೆ. ಭಾವೈಕ್ಯತೆಯ ಸಂದೇಶ ಹೊತ್ತು ತರುತ್ತದೆ. ಜಗದ ಜನರೆಲ್ಲರೂ, ಭಾವೈಕ್ಯತೆಯಿಂದ ಬದುಕಬೇಕು. ಆಚರಣೆ ಬೇರೆಯಾದರೂ, ಸಕಲ ಜೀವಾತ್ಮರಿಗೆ ಒಳ್ಳೆಯದನ್ನು ಬಯಸುವ ಹಬ್ಬಗಳು ಯುಗಾದಿ ಮತ್ತು ರಂಜಾನ್ ಎಂದರು.

ಗದಗ ತಾಲೂಕಿನ ನೀರಲಗಿ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕರಾದ ಪಿ.ಟಿ. ಬೈಲಪ್ಪನವರ ಉಪನ್ಯಾಸ ನೀಡಿ, ಯುಗಾದಿ ಹಬ್ಬದ ಆಚರಣೆಯ ಹಿಂದೆ ವೈಜ್ಞಾನಿಕ ದೃಷ್ಟಿಕೋನವಿದೆ. ಮಾವಿನ ತಳಿರಿನಲ್ಲಿ ಬ್ಯಾಕ್ಟೀರಿಯಾಗಳನ್ನು ಕೊಲ್ಲುವ



ಗುಣವಿದೆ. ರೈತರಿಗೆ ಯುಗಾದಿ ಕೃಷಿ ಕಾಯಕ ಕೈಗೊಳ್ಳಲು ಉತ್ತಮ ದಿನ. ಗಿಡಮರಗಳೆಲ್ಲಾ ಹಸಿರು ತೊಟ್ಟರೆ, ಮನೆಮಂದಿಯೆಲ್ಲಾ ಹೊಸ ಬಟ್ಟೆ ತೊಟ್ಟು ಆನಂದಿಸುವ ಹಬ್ಬ ಯುಗಾದಿ. ಯುಗಾದಿ ಮತ್ತು ರಂಜಾನ್ ಹಬ್ಬಗಳು ಸಾಮರಸ್ಯದಿಂದ ಬದುಕಲು ಕಲಿಸುತ್ತೇವೆ. ಒಳ್ಳೆಯದನ್ನೇ ಬೋಧಿಸುತ್ತವೆ ಎಂದರು.

ವಿಶ್ವ ರಂಗಭೂಮಿ ದಿನಾಚರಣೆ ಅಂಗವಾಗಿ ಹಿರಿಯ ಕಲಾವಿದರಾದ ಸುಭಾಸ ಮಳಗಿ, ಮಲ್ಲೇಶಗೌಡ ತಿಮ್ಮೇಗೌಡ್ರ ಹಾಗೂ ಬಾಲ ಕಲಾವಿದೆ ನಿಖಿತಾ ಅಶೋಕ್ ಸುತಾರ ಇವರನ್ನು ಸನ್ಮಾನಿಸಲಾಯಿತು.

ವಚನ ಸಂಗೀತ ಸೇವೆಯನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ಸಂಗೀತ ನಡೆಸಿಕೊಟ್ಟರು. ಧರ್ಮಗ್ರಂಥ ಪಠಣವನ್ನು ರೇವತಿ ಗೌಡರ ಹಾಗೂ ವಚನ ಚಿಂತನವನ್ನು ಲಾವಣ್ಯ ಗೌಡರ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಶಿವಯೋಗಿ ಕಂಠಯ್ಯ ತೆಗ್ಗಿನಮಠ ಹಾಗೂ ಗಂಗಾಧರ ಹಿರೇಮಠ, ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ-2018 ಇವರುಗಳು ವಹಿಸಿಕೊಂಡಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ, ಶ್ರೀ ಮಠದ ಭಕ್ತರು ಉಪಸ್ಥಿತರಿದ್ದರು. ಮಹೇಶ ಗಾಣಿಗೇರ ಸ್ವಾಗತಿಸಿದರು. ಐ.ಬಿ. ಬೆನಕೊಪ್ಪ ಪರಿಚಯಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

ವಿಶ್ವ ರಂಗಭೂಮಿ ದಿನಾಚರಣೆ ಅಂಗವಾಗಿ, ಸುತಾರ ಸಾಂಸ್ಕೃತಿಕ ಕಲಾ ಸಂಘ ಬೇಟಗೇರಿಯ ಅಶೋಕ್ ಸುತಾರ ಹಾಗೂ ತಂಡದವರಿಂದ ಬಯಲಾಟ ಪ್ರದರ್ಶನ ನಡೆಯಿತು. ಬಯಲಾಟ ಪ್ರದರ್ಶನ ನೀಡಿದ ಅಶೋಕ್ ಸುತಾರ ಮಾತನಾಡಿ, ಶ್ರೀಮಠದ ಹಿಂದಿನ ತೋಂಟದಾರ್ಯ ಸಿದ್ದಲಿಂಗ ಮಹಾಸ್ವಾಮಿಗಳು ನಮ್ಮಂತಹ ಎಷ್ಟೋ ಕಲಾವಿದರು ರೂಪುಗೊಳ್ಳಲು ಕಾರಣವಾಗಿದ್ದಕ್ಕೆ ನಾವಿಂದು ಕಲಾವಿದರಾಗಿದ್ದೇವೆ. ಐವತ್ತು ವರ್ಷಗಳಲ್ಲಿ ಈ ವೇದಿಕೆಯಿಂದ ಸಾವಿರಾರು ಜನ ಉಪನ್ಯಾಸಕರು, ಕಲಾವಿದರು ಸಂಗೀತಗಾರರು ಮತ್ತು ನಾಟಕಕಾರರು ರೂಪುಗೊಂಡಿದ್ದಾರೆ ಎಂದರು.



ಇತ್ತೀಚೆಗೆ ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರಿಂದ ಮುಖ್ಯಮಂತ್ರಿ ಪದಕ ಪಡೆದು ಗದಗ ಜಿಲ್ಲಾ ಪೊಲೀಸ್ ಇಲಾಖೆಯ ಕೀರ್ತಿಯನ್ನು ಹೆಚ್ಚಿಸಿದ, ಸೈಬರ್ ಕ್ರೈಂ ವಿಭಾಗದಲ್ಲಿ ಹಿರಿಯ ಪೊಲೀಸ್ ಪೇದೆಯಾಗಿ ಕಾರ್ಯ ನಿರ್ವಹಿಸುತ್ತಿರುವ ಆನಂದಸಿಂಗ್ ದೊಡ್ಡಮನಿ ಅವರನ್ನು ಗದಗ ನಗರದ ಬಿಲಾಲ ಮಸೀದಿಯ ಹಿರಿಯರಾದ ಶಿರಾಜ ಕದಡಿ, ಹಾಜಿಅಲಿ ಕೊಪ್ಪಳ, ಕರೀಮಸಾಬ ಸುಣಗಾರ ನೇತೃತ್ವದ ನಿಯೋಗವು ಸನ್ಮಾನಿಸಿ, ಅಭಿನಂದಿಸಿತು. ಈ ಸಂದರ್ಭದಲ್ಲಿ ಗದಗ ನಗರದ ಬಿಲಾಲ ಓಣಿಯ ಬಾಂಧವರಿದ್ದರು.



ಇತ್ತೀಚೆಗೆ ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಮುಖ್ಯಮಂತ್ರಿ ಪದಕ ಪಡೆದು ಗದಗ ಜಿಲ್ಲಾ ಪೊಲೀಸ್ ಇಲಾಖೆಯ ಕೀರ್ತಿಯನ್ನು ರಾಜ್ಯಾದ್ಯಂತ ಪಸರಿಸಿದ ಗದಗ ಗ್ರಾಮೀಣ ಪೊಲೀಸ್ ಠಾಣೆಯ ಪಿ.ಎಸ್.ಐ ಲಾಲ್‌ಸಾಬ್ ಜೂಲಕಟ್ಟಿ ಅವರನ್ನು ಗದಗ ನಗರದ ಬಿಲಾಲ ಮಸೀದಿಯ ಹಿರಿಯರಾದ ಶಿರಾಜ ಕದಡಿ, ಹಾಜಿಅಲಿ ಕೊಪ್ಪಳ, ಕರೀಮಸಾಬ ಸುಣಗಾರ ನೇತೃತ್ವದ ನಿಯೋಗ ಸನ್ಮಾನಿಸಿ, ಅಭಿನಂದಿಸಿತು. ಈ ಸಂದರ್ಭದಲ್ಲಿ ಗದಗ ನಗರದ ಬಿಲಾಲ ಓಣಿಯ ಬಾಂಧವರಿದ್ದರು.

### ಧರ್ಮ ಸಂಸ್ಕೃತಿ ಸಂವರ್ಧನ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

# ಪ್ರಯತ್ನ, ಪರಿಶ್ರಮದಿಂದ ಪ್ರಗತಿ ಸಾಧ್ಯ

■ ವಿಜಯಸಾಕ್ಷಿ ಸುದ್ದಿ, ಕಲಬುರ್ಗಿ

ಬಾಳಿನ ಭಾಗ್ಯೋದಯಕ್ಕೆ ಆದರ್ಶ ಮೌಲ್ಯಗಳ ಪರಿಪಾಲನೆ ಬೇಕು. ಗಳಿಸಿದ ಸಂಪತ್ತು ಸತ್ಕಾರ್ಯಗಳಿಗೆ ಸಲ್ಲಬೇಕು. ನಿರಂತರ ಪ್ರಯತ್ನ ಮತ್ತು ಪರಿಶ್ರಮದಿಂದ ಅದ್ಭುತ ಪ್ರಗತಿ ಕಾರ್ಯ ಮಾಡಲು ಸಾಧ್ಯವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಬಬಲಾದ (ಎಸ್) ಗ್ರಾಮದ ಶ್ರೀಮದ್ ರಂಭಾಪುರಿ ಖಾಸಾ ಶಾಖಾ ಶ್ರೀ ಮಲ್ಲಿಕಾರ್ಜುನ ಬೃಹನ್ಮಠದ 61ನೇ ಜಾತ್ರಾ ಮಹೋತ್ಸವ ಹಾಗೂ ಸಿದ್ಧಶ್ರೀ ಸಭಾ ಭವನ ಲೋಕಾರ್ಪಣೆ ಅಂಗವಾಗಿ ಜರುಗಿದ ಧರ್ಮ ಸಂಸ್ಕೃತಿ ಸಂವರ್ಧನ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಧರ್ಮ, ದೇಶ ಮನುಷ್ಯನ ಎರಡು ಕಣ್ಣು. ನೀತಿ-ನಿಯಮ ಇಲ್ಲದೇ ಸಮಾಜ ನಾಡು ಬೆಳೆಯಲಾರದು. ಧರ್ಮ ಮತ್ತು ಧರ್ಮಾಚರಣೆಯಿಂದ ಮಾನವನ ಬದುಕು ಉಜ್ವಲಗೊಳ್ಳುತ್ತದೆ. ಹಣ ಅಧಿಕಾರದ



ಧರ್ಮ ಸಮಾರಂಭ ಉದ್ಘಾಟಿಸಿದ ಕಲಬುರ್ಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಮಾತನಾಡಿ, ಬೆಟ್ಟ ಎಂದಿಗೂ ಬಾಗುವುದಿಲ್ಲ. ಆದರೆ ಕಷ್ಟಪಟ್ಟು ಏರಿದ ಮೇಲೆ ಅದು ನಮ್ಮ ಪಾದದ ಕೆಳಗೆ ಇರುತ್ತದೆ. ಹಿಂದೆ ಗುರು, ಮುಂದೆ ಗುರಿ ಇದ್ದಾಗ ಜೀವನದಲ್ಲಿ ಶ್ರೇಯಸ್ಸು ಕಾಣಲು ಸಾಧ್ಯ ಎಂದರು.

ಬಗ್ಗೆ ಸದಾ ಚಿಂತಿಸುವ ಮನುಷ್ಯ ದೇಶ-ಸಂಸ್ಕೃತಿ ಮತ್ತು ಧರ್ಮದ ಬಗ್ಗೆ ಚಿಂತಿಸಲಾರ. ನೆಮ್ಮದಿಯ ಬದುಕಿಗೆ ಧರ್ಮ ಬೇಕು. ಸಂತೃಪ್ತಿ-ಸಮೃದ್ಧಿಗಾಗಿ ಧರ್ಮಾಚರಣೆ ಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರ ಜ್ಞಾನ ಕ್ರಿಯಾತ್ಮಕವಾದ ಧರ್ಮ ಪಾಲನೆಯಿಂದ ಜಗದಲ್ಲಿ ಶಾಂತಿ ನೆಲೆಸಲು ಸಾಧ್ಯವಾಗುತ್ತದೆ ಎಂದರು.

ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ ಸಭಾಭವನ ಉದ್ಘಾಟಿಸಿ ಮಾತನಾಡಿ, ಶ್ರೀ ಮಠದ ಚಾರಿತ್ರಿಕ ಇತಿಹಾಸದಲ್ಲಿ ಈ ದಿನ ಅವಿಸ್ಮರಣೀಯ ದಿನ. ಶ್ರೀಗಳವರ ಬಹು ದಿನಗಳ ಕನಸು ನನಸಾದ ಸುದಿನ. ಶ್ರೀಗಳವರ ನಿರಂತರ ಪ್ರಯತ್ನ ಮತ್ತು ಸಾಧನೆಯಿಂದ ಅದ್ಭುತ ಕಾರ್ಯ ಕೈಗೊಳ್ಳಲು ಸಾಧ್ಯವಾಗಿದೆ ಎಂದರು.

ನೇತೃತ್ವ ವಹಿಸಿದ ಮಠಾಧ್ಯಕ್ಷರಾದ ಶಿವಮೂರ್ತಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿದರು. ಸಮಾರಂಭದಲ್ಲಿ ಕಲಬುರ್ಗಿ ಡಾ. ರಾಜಶೇಖರ ಶ್ರೀಗಳು, ಅಂಕಲಗಿ ಅಭಿನವ ಗುರುಬಸವ ಶ್ರೀಗಳು, ಹೆಡಗಿಮುದ್ರಾ ಶಾಂತಮಲ್ಲಿಕಾರ್ಜುನ ಶ್ರೀಗಳು, ಶ್ರೀನಿವಾಸ ಸರಡಗಿ ರೇವಣಸಿದ್ಧ ಶ್ರೀಗಳು, ತೊನಸನಹಳ್ಳಿ ರೇವಣಸಿದ್ಧ ಚರಂತೇಶ್ವರ ಶ್ರೀಗಳು, ರಾಜೇಶ್ವರ ಘನಲಿಂಗ ರುದ್ರಮುನಿ ಶ್ರೀಗಳು, ನವಲಕಲ್ ಅಭಿನವ ಸೋಮನಾಥ ಶ್ರೀಗಳು ಪಾಲ್ಗೊಂಡು ಸಮ್ಮುಖ ವಹಿಸಿ ಶುಭ ಕೋರಿದರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಆರ್. ಪಾಟೀಲ, ಎಂ.ವೈ. ಪಾಟೀಲ, ಶರನಗೌಡ ಕಂದಕೂರು, ಕೆ.ಕೆ.ಸಿ.ಸಿ ಅಧ್ಯಕ್ಷ ಶರಣು ಪಪ್ಪಾ, ಮಾಜಿ ಸಚಿವ ನರಸಿಂಹನಾಯಕ, ಚಂದು ಪಾಟೀಲ, ನೀಲಕಂಠರಾವ ಮೂಲಗೆ, ಬಿ.ಎಂ. ಹಳಿಕೋಟೆ, ರಾಜಾ ಹನುಮಪ್ಪನಾಯಕ ತಾತಾ, ಹೆಚ್.ಸಿ. ಪಾಟೀಲ, ಲಿಂಗರಜ ಅಪ್ಪ, ಸಂತೋಷ ಬಿಲಗುಂದಿ, ಶಿವಶರಣಪ್ಪ ಸೀರಿ, ಸಂತೋಷ ಪಾಟೀಲ, ಡಾ. ವಿಕ್ರಂ ಪಾಟೀಲ, ವಿಶೇಷ ಆಹ್ವಾನಿತರಾಗಿ ಬೆಂಗಳೂರು ಕೆ.ಪಿ.ಎಸ್.ಸಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ, ಬಿಬಿಎಂಪಿ ಇಇ ಚನ್ನಬಸಪ್ಪ ಮೆಕಾಲೆ ಭಾಗವಹಿಸಿ ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಆಶೀರ್ವಾದ ಪಡೆದರು.

ಡಿ.ಸಿ.ಸಿ.ಬ್ಯಾಂಕಿನ ಉಪಾಧ್ಯಕ್ಷ ಸುರೇಶ ಸಜ್ಜನ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಂಜುನಾಥ ಕಾಳೆ ಸ್ವಾಗತಿಸಿದರು. ಅಮರಯ್ಯಸ್ವಾಮಿ ನಿರೂಪಿಸಿದರು.

# ಬೇಸಿಗೆ ಫುಟ್ಬಾಲ್ ತರಬೇತಿ ಶಿಬಿರ ನಾಳೆ



■ ವಿಜಯಸಾಕ್ಷಿ ಸುದ್ದಿ, ಗದಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದೊಂದಿಗೆ ಗದಗ ಸಿಟಿ ಫುಟ್ಬಾಲ್ ಕ್ಲಬ್ ವತಿಯಿಂದ ಎಪ್ರಿಲ್ 7ರಂದು ಬೆಳಿಗ್ಗೆ 11.30ಕ್ಕೆ ಬೇಸಿಗೆ ಫುಟ್ಬಾಲ್ ತರಬೇತಿ ಶಿಬಿರ ನಡೆಯಲಿದ್ದು, ಜಿಲ್ಲಾ ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷ ಕೆ.ಎಚ್. ಪಾಟೀಲ ಸಭಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಕೊಳ್ಳಲಿದ್ದಾರೆ ಎಂದು ಮುಖ್ಯ ತರಬೇತುದಾರ ಶ್ಯಾಮ್ಸನ್ ಡಾನ್ ಹೇಳಿದರು.

ಶನಿವಾರ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಗದಗ ಜಿಲ್ಲಾ ಫುಟ್ಬಾಲ್ ಜಿ.ಝಡ್.ಎಫ್.ಸಿ ಬದಲಾಗಿ, ಹೊಸದಾಗಿ ಗದಗ ಸಿಟಿ ಫುಟ್ಬಾಲ್ ಕ್ಲಬ್ ಜಿ.ಸಿ.ಎಫ್.ಸಿ ಎಂದು ಮರು ನಾಮಕರಣ ಮಾಡಿರುವುದರಿಂದ ಕ್ಲಬ್ ಉದ್ಘಾಟನೆ ಮಾಡಲಾಗುತ್ತಿದೆ. ಜೊತೆಗೆ, ಗದಗ ಸಿಟಿ ಫುಟ್ಬಾಲ್ ಕ್ಲಬ್‌ನ ನೂತನ ಲೋಗೋ ಬಿಡುಗಡೆ ನಡೆಯಲಿದ್ದು, ಹೊಸದಾಗಿ ಗದಗ ಸಿಟಿ ಫುಟ್ಬಾಲ್ ಕ್ಲಬ್ ಜರ್ಸಿ ಅನಾವರಣ ಕಾರ್ಯಕ್ರಮ ನಡೆಯಲಿದೆ ಎಂದರು.

ಫುಟ್ಬಾಲ್ ತರಬೇತಿ ಶಿಬಿರದಲ್ಲಿ ಭಾಗವಹಿಸುವ ಬಾಲಕ-ಬಾಲಕಿಯರಿಗೆ ಆಲ್ ಇಂಡಿಯಾ ಫುಟ್ಬಾಲ್ ಫೆಡರೇಶನ್‌ನಿಂದ ಮಾನ್ಯತೆ ಪಡೆದ ಅನುಭವಿ ಫುಟ್ಬಾಲ್ ತರಬೇತುದಾರರಿಂದ ತರಬೇತಿ ನೀಡಿ, ಮುಂಬರುವ ದಿನಗಳಲ್ಲಿ ಗದಗ ಜಿಲ್ಲೆಯಿಂದ ಬಾಲಕ-ಬಾಲಕಿಯರನ್ನು ರಾಷ್ಟ್ರ ಮತ್ತು ಅಂತಾರಾಷ್ಟ್ರ ಮಟ್ಟದಲ್ಲಿ ಜರಗುವ ಫುಟ್ಬಾಲ್ ಕ್ರೀಡೆಯಲ್ಲಿ ಪ್ರತಿನಿಧಿಸುವುದು ಮುಖ್ಯ ಉದ್ದೇಶವಾಗಿದೆ. ತರಬೇತಿ ಶಿಬಿರ ಪೂರ್ಣಗೊಂಡ ನಂತರ ಫುಟ್ಬಾಲ್ ಕ್ಲಬ್ ವತಿಯಿಂದ ಪ್ರತಿದಿನ ಬೆಳಿಗ್ಗೆ ಮತ್ತು ಸಾಯಂಕಾಲ ತರಬೇತಿ ನೀಡಲಾಗುವುದು ಎಂದವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಯಾಸೀನ್ ಈಟಿ, ರಾಘವೇಂದ್ರ ಮುಂಡರಗಿ, ರಿಚರ್ಡ್ ಧರ್ಮದಾಸ್, ಶಶಿಕುಮಾರ ಮುಂಡರಗಿ, ರಾಮಚಂದ್ರ ಮುಂಡರಗಿ ಉಪಸ್ಥಿತರಿದ್ದರು.

# ಶ್ರೀ ಕರಿಯಮ್ಮ ದೇವಿಯ ಮಹಾ ರಥೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಹುಲಕೋಟಿ ಗ್ರಾಮದ ಶ್ರೀರಾಮ ಮಂದಿರದಲ್ಲಿ ಶ್ರೀರಾಮ ನವಮಿಯನ್ನು ಎಪ್ರಿಲ್ 6ರಂದು ವಿಜ್ರಂಭಣೆಯಿಂದ ಆಚರಿಸಲಾಗುವುದು. ಬೆಳಿಗ್ಗೆ ಶ್ರೀರಾಮನಿಗೆ ಅಭಿಷೇಕ, ಪೂಜೆ, 10 ಗಂಟೆಗೆ ಶ್ರೀರಾಮನ ತೊಟ್ಟಿಲೋತ್ಸವ, ಮಧ್ಯಾಹ್ನ ಸಕಲ ಸದ್ಭಕ್ತರಿಗೆ ಪಾನಕ ಪ್ರಸಾದ ಸೇವೆ ಜರುಗುವುದು.

ಎಪ್ರಿಲ್ 7ರಂದು ಗ್ರಾಮ ದೇವತೆ ಶ್ರೀ ಕರಿಯಮ್ಮ ದೇವಿಯ ಮಹಾ ರಥೋತ್ಸವ ಜರುಗಲಿದ್ದು, ಬೆಳಿಗ್ಗೆ ಗ್ರಾಮದ ಎಲ್ಲಾ ದೇವರಿಗೆ ಅಭಿಷೇಕ, ಶ್ರೀರಾಮ ಭಜನಾ ಸಂಘದವರಿಂದ ದಿಂಡಿ ಪ್ರದಕ್ಷಿಣೆ, ಮಧ್ಯಾಹ್ನ ಗ್ರಾಮದ ಎಲ್ಲಾ ದೇವರಿಗೆ ಊರಿನ ಮುತ್ತೈದೆಯರಿಂದ ಉಡಿ ತುಂಬುವ ಕಾರ್ಯಕ್ರಮ, ಪಾಲಕಿ ಸೇವೆ, ಮಧ್ಯಾಹ್ನ 1.30ಕ್ಕೆ ಅನ್ನ ಸಂತರ್ಪಣೆ ನೆರವೇರುವುದು.

ಸಾಯಂಕಾಲ 6 ಗಂಟೆಗೆ ಶ್ರೀ ಕರಿಯಮ್ಮ ದೇವಿಯ ರಥೋತ್ಸವ, ಎ.8ರ ಸಾಯಂಕಾಲ 6 ಗಂಟೆಗೆ ಲಘು ರಥೋತ್ಸವ ಜರುಗಲಿದೆ.

ಸುತ್ತಮುತ್ತಲಿನ ಗ್ರಾಮದ ಹಾಗೂ ಹುಲಕೋಟಿಯ ಗ್ರಾಮದ ಸರ್ವ ಸದ್ಭಕ್ತರು ರಥೋತ್ಸವದಲ್ಲಿ ಪಾಲ್ಗೊಂಡು ಗ್ರಾಮ ದೇವತೆ ಶ್ರೀ ಕರಿಯಮ್ಮ ದೇವಿಯ ಕೃಪೆಗೆ ಪಾತ್ರರಾಗಬೇಕೆಂದು ದೇವಸ್ಥಾನ ಟ್ರಸ್ಟ್ ಕಮಿಟಿಯ ಅಧ್ಯಕ್ಷರು ಮತ್ತು ಸರ್ವ ಸದಸ್ಯರು ವಿನಂತಿಸಿದ್ದಾರೆ.

### ಈಗ ಎಲ್ಲರೂ ಮೀಸಲಾತಿ ಪರವಾಗಿದ್ದಾರೆ- ಸಿ.ಎಂ. ಸಿದ್ದರಾಮಯ್ಯ

# ಮೀಸಲಾತಿ ವಿರೋಧಿಸುವವರು ಯಾರೂ ಇಲ್ಲ

■ ಮೀಸಲಾತಿ ವಿರುದ್ಧ ಮಾತಾಡುತ್ತಿದ್ದವರೆಲ್ಲಾ ಈಗ ಮೀಸಲಾತಿ ಪಡೆದಿದ್ದಾರೆ-ಹಬ್ಬ ಬಂದಾಗ ಮಾತ್ರ ನನಗೆ ಅನ್ನ ಸಿಗುತಿತ್ತು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮೀಸಲಾತಿ ವಿರುದ್ಧ ಮಾತಾಡುತ್ತಿದ್ದವರೆಲ್ಲಾ ಈಗ ಮೀಸಲಾತಿ ಪಡೆದು ಸವಲತ್ತುಗಳನ್ನು ಅನುಭವಿಸುತ್ತಿದ್ದಾರೆ. ಆದ್ದರಿಂದ ಈಗ ಮೀಸಲಾತಿ ವಿರೋಧಿಸುವವರು ಯಾರೂ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು.

ವಿಧಾನಸೌಧದ ಗ್ರಾಂಡ್ ಸ್ಟೆಪ್ಸ್ ಮೇಲೆ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಡಾ.ಬಾಬು ಜಗಜೀವನ ರಾಮ್ ಅವರ 118ನೇ ಜನ್ಮ ದಿನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಬಾಬು ಜಗಜೀವನ್ ರಾಮ್ ಸ್ವಾತಂತ್ರ್ಯ ಪ್ರೇಮಿ, ಸಾಮಾಜಿಕ ನ್ಯಾಯದ ಪರವಾಗಿದ್ದವರು. ಜಾತಿ ವ್ಯವಸ್ಥೆ ಕಾರಣದಿಂದ ಸಮಾಜದಲ್ಲಿ ಅಸಮಾನತೆ ಇದೆ. ಜಾತಿ ಇರುವವರೆಗೂ ಮೀಸಲಾತಿ ಇರಬೇಕು ಎಂದು ಸ್ಪಷ್ಟವಾದ ನಿಲುವು ಹೊಂದಿದ್ದರು ಎಂದು ವಿವರಿಸಿದರು.

ನರೇಂದ್ರ ಮೋದಿಯವರು ಇಢಾಖ ಹೆಸರಲ್ಲಿ ಶೇ10 ಕಲ್ಪಿಸಿದ ಬಳಿಕ ಎಲ್ಲರೂ ಮೀಸಲಾತಿ ಫಲಾನುಭವಿಗಳೇ ಆಗಿಬಿಟ್ಟಿದ್ದಾರೆ ಎಂದು ವಿವರಿಸಿದರು.

ನಮ್ಮ ರಾಜ್ಯದಲ್ಲಿ ಮತ್ತು ತೆಲಂಗಾಣ, ಆಂಧ್ರದಲ್ಲಿ ಮಾತ್ರ ಖಅಕ-ಖಿಖಕ ಕಾಯ್ದೆ ಜಾರಿಯಲ್ಲಿದೆ. ಸಾಮಾಜಿಕ ನ್ಯಾಯದ ಬಗ್ಗೆ ಭಾಷಣ ಮಾಡುವ ಬಿಜೆಪಿ ಅವರ ಆಡಳಿತದ ರಾಜ್ಯಗಳಲ್ಲಿ ಈ ಕಾಯ್ದೆ ತಂದೇ ಇಲ್ಲ ಏಕೆ ? ಬರೀ ಭಾಷಣ ಮಾಡಿದರೆ ಸಾಕಾ, ಅದು ಕ್ರಿಯೆಯಲ್ಲಿ ಕಾಣಬಾರದಾ ಎಂದು ಪ್ರಶ್ನಿಸಿದರು.

ನಾವು ಜಾರಿ ಮಾಡಿರುವ ಐದೂ ಗ್ಯಾರಂಟಿಗಳೂ ಜನರ ಕೈಯಲ್ಲಿ ಹಣ ಇರಬೇಕು, ಕೊಳ್ಳುವ ಶಕ್ತಿ ಹೆಚ್ಚಾಗಬೇಕು ಎನ್ನುವ ನಮ್ಮ ಉದ್ದೇಶವನ್ನು ಯಶಸ್ವಿಯಾಗಿ ಈಡೇರಿಸಿದೆ ಎಂದರು.



ಜಾತಿ ಸೃಷ್ಟಿಸಿದವರು ನಾವಲ್ಲ. ಆದರೆ ಈ ಜಾತಿಯ ಅಸಮಾನತೆಗೆ ಬಲಿ ಆಗಿರುವವರು ನಾವು. ಜಾತಿ ಇರುವವರೆಗೂ ಸಮಾನ ಅವಕಾಶಗಳು ಸಿಗುವುದಿಲ್ಲ. ಏಕೆಂದರೆ ಜಾತಿ ವ್ಯವಸ್ಥೆಗೆ ಚಲನೆ ಇಲ್ಲ ಎಂದರು.

ಬಾಬು ಜಗಜೀವನ್ ರಾಮ್ ಅವರು ಕೇಂದ್ರ ಸಚಿವರಾಗಿ ಹಸಿರು ಕ್ರಾಂತಿ ಮಾಡಿ ಎಲ್ಲರಿಗೂ ಆಹಾರ ಸಿಗುವಂತೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ನಮಗೆಲ್ಲಾ ಹಬ್ಬದ ದಿನ ಮಾತ್ರ ಅನ್ನ ಸಿಗುತ್ತಿತ್ತು. ಈ ಪರಿಸ್ಥಿತಿ ಯಾರಿಗೂ ಬರಬಾರದು, ಯಾರೂ ಹಸಿವಿನಿಂದ ಮಲಗಬಾರದು ಎನ್ನುವ ಉದ್ದೇಶದಿಂದ ಅನ್ನ ಭಾಗ್ಯ ಜಾರಿ ಮಾಡಿದೆ ಎಂದು ವಿವರಿಸಿದರು.

ಒಳ ಮೀಸಲಾತಿ ಬಗ್ಗೆ ಅನುಮಾನ ಬೇಡ. ಜಾರಿ ಮಾಡೇ ಮಾಡ್ತೀವಿ. ನೀವು ಬೇಡ ಅಂದರೂ ನಾವು ಜಾರಿ ಮಾಡ್ತೀವಿ. ಸುಪ್ರೀಂಕೋರ್ಟ್ ಆದೇಶವನ್ನು ನಾವು ಖಚಿತವಾಗಿ ಪಾಲಿಸುತ್ತೇವೆ. ನಾಗಮೋಹನ್ ದಾಸ್ ಅವರು ಎರಡು ತಿಂಗಳ ಕಾಲಾವಧಿ ಕೇಳಿದ್ದಾರೆ. ನಾವು ಕೊಟ್ಟಿದ್ದೇವೆ. ಬಳಿಕ ಯಾರಿಗೂ ಅನ್ಯಾಯ ಆಗದಂತೆ ಜಾರಿ ಮಾಡುತ್ತೇವೆ ಎಂದು ಸಿಎಂ ಭರವಸೆ ನೀಡಿದರು.

ಹೀಗಾಗಿ ಮಹಾನ್ ಚೇತನ ಬಾಬು ಜಗಜೀವನ್ ರಾಮ್ ಅವರ ಕಾಳಜಿಗಳನ್ನು ಸ್ಮರಿಸಬೇಕು. ಅವರು ಹಾಕಿಕೊಟ್ಟಿರುವ ಹೆಜ್ಜೆ ಗುರುತುಗಳನ್ನು ಪಾಲಿಸಬೇಕು ಎಂದರು.

ಜಗಜೀವನ್ ರಾಮ್ ಮತ್ತು ಅಂಬೇಡ್ಕರ್ ಇಬ್ಬರಿಗೂ ಸಮಾಜದ ಕಷ್ಟ ಗೊತ್ತಿತ್ತು. ಈ ಕಷ್ಟಗಳಿಗೆ ಪರಿಹಾರ ಕಂಡುಕೊಳ್ಳುವ ಮಾರ್ಗವಾಗಿ ಸಂವಿಧಾನ ಬಂತು, ನಮಗೆಲ್ಲಾ ಶಿಕ್ಷಣ ಸಿಕ್ಕಿತು ಎಂದರು.

ಮತ್ತೊಬ್ಬ ಅಂಬೇಡ್ಕರ್, ಜಗಜೀವನ್ ರಾಮ್ ನಮಗೆ ಸಿಗುವುದಿಲ್ಲ. ಹೀಗಾಗಿ ಇವರು ಬಿಟ್ಟು ಹೋಗಿರುವ ಚಿಂತನೆ ಮತ್ತು ಕಾಳಜಿಗಳನ್ನು ಪಾಲಿಸಬೇಕು ಎಂದರು.

## ರಾಮಗೇರಿಯಲ್ಲಿ ಗ್ರಾಮ ದೇವಿಯ ಜಾತ್ರಾ ಮಹೋತ್ಸವ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ರಾಮಗೇರಿ ಗ್ರಾಮದಲ್ಲಿ ಗ್ರಾಮ ದೇವಿಯ ಜಾತ್ರಾ ಮಹೋತ್ಸವದ ಧಾರ್ಮಿಕ ಕಾರ್ಯಕ್ರಮಗಳು ಎಪ್ರಿಲ್ 4ರಿಂದ ಪ್ರಾರಂಭಗೊಂಡಿದ್ದು, ಎ.11ರವರೆಗೆ ನಡೆಯಲಿವೆ. ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು, ಗಂಜಿಗಟ್ಟಿಯ ಶ್ರೀ ವೈಜನಾಥ ಶಿವಲಿಂಗೇಶ್ವರ ಸ್ವಾಮೀಜಿ ಮತ್ತು ಧಾರವಾಡದ ಶ್ರೀ ಬಸವರಾಜ ದೇವರು ಸಾನ್ನಿಧ್ಯ ವಹಿಸುವರು. ಎ.4ರಿಂದ 6ರವರೆಗೆ ಬೆಳಿಗ್ಗೆ ಅಂಕಿ ಹಾಕುವುದು, ಘಟ್ಟಿ ಗಡಿಗೆ ಪೂಜೆ ಹಾಗೂ ಸಂಜೆ ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುತ್ತಿವೆ. ಎ.7ರಂದು ಗಣಹೋಮ ಹಾಗೂ ಸಾಮೂಹಿಕ ಗೋಪೂಜಾ ಕಾರ್ಯಕ್ರಮ ಜರುಗುವುದು. ಎ.8ರಂದು ಸಂಜೆ 4.30ಕ್ಕೆ ಗ್ರಾಮದೇವಿಯ ಮೂರ್ತಿ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿ ಚೌತಮನೆ ಕಟ್ಟೆಯಲ್ಲಿ ದೇವಿ ವಿರಾಜ ಮಾನಳಾಗುವಳು. ಎ.9ರಂದು ಬೆಳಿಗ್ಗೆ ಉಡಚಮ್ಮದೇವಿ ಮತ್ತು ಶ್ರೀ ಅಕ್ಕ-ತಂಗೆಮ್ಮದೇವಿ ದೇವಸ್ಥಾನಗಳ ಲೋಕಾರ್ಪಣೆ ಹಾಗೂ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ ನಡೆದ ಬಳಿಕ ಹುಲುಸು ಚೆಲ್ಲುವ ಕಾರ್ಯಕ್ರಮ ಜರುಗಲಿದೆ. ಎ.10ರಂದು ಧರ್ಮಸಭೆ ಹಾಗೂ ಕೊತಬಾಳದ ಅರುಣೋದಯ ಸಾಂಸ್ಕೃತಿಕ ಕಲಾ ತಂಡದಿಂದ ರಸಮಂಜರಿ ಕಾರ್ಯಕ್ರಮ ಹಾಗೂ ದೇವಿಯು ಗಡಿಗೆ ಹೋಗುವ ಕಾಯಕ್ರಮವಿದೆ. ಎ.11ರಂದು ಬೆಳಿಗ್ಗೆ ದೇವಿಗೆ ಉಡಿ ತುಂಬುವ ಕಾರ್ಯಕ್ರಮ ನಡೆಯಲಿದೆ ಎಂದು ಭಕ್ತ ಮಂಡಳಿ ಪ್ರಕಟಣೆ ತಿಳಿಸಿದೆ.

## ಶಿವಾನುಭವ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಬಸವಕೇಂದ್ರ ಹಾಗೂ ಜಾಗತಿಕ ಲಿಂಗಾಯತ ಮಹಾಸಭಾ ಸಂಯುಕ್ತ ಆಶ್ರಯದಲ್ಲಿ ಶಿವಾನುಭವ ಕಾರ್ಯಕ್ರಮವನ್ನು ಎಪ್ರಿಲ್ 6ರ ಸಾಯಂಕಾಲ 6.30ಕ್ಕೆ ಇಲ್ಲಿನ ಒಕ್ಕಲಗೇರಿಯಲ್ಲಿರುವ ಚಿಲ್ಲಾಳೇಶ್ವರ ಮಠದಲ್ಲಿ ಆಯೋಜಿಸಲಾಗಿದೆ. ಶಿವಾನುಭವ ಕಾರ್ಯಕ್ರಮದಲ್ಲಿ ಶ್ರೀ ಎಡೆಯೂರು ಸಿದ್ಧಲಿಂಗೇಶ್ವರ ಸ್ವಾಮಿ ಕುರಿತು ಉಪನ್ಯಾಸವನ್ನು ನಿವೃತ್ತ ಪ್ರಾಚಾರ್ಯ, ಶರಣ ಪ್ರೊ. ಎಂ.ಎನ್. ಪವಾಡಿಗೌಡ್ರ ನೀಡುವರು. ಅಧ್ಯಕ್ಷತೆಯನ್ನು ಲೆಕ್ಕ ಪರಿಶೋಧಕರಾದ ಶರಣ ಕೆ.ಎಸ್. ಚೆಟ್ಟಿ ವಹಿಸುವರು. ಕಾರಣ ಎಲ್ಲಾ ಸದಸ್ಯರು ಆಗಮಿಸುವಂತೆ ಕಾರ್ಯದರ್ಶಿ ಶೇಖಣ್ಣ ಕವಳಿಕಾಯಿ ಹಾಗೂ ಸಂಚಾಲಕ ಕಿರಣ ತಿಪ್ಪಣ್ಣನವರ ವಿನಂತಿಸಿದ್ದಾರೆ.

**ಪತ್ರಿಕಾಗೋಷ್ಠಿಯಲ್ಲಿ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕೀರಪ್ಪ ಹೆಬಸೂರು ಮಾಹಿತಿ**

# ಜೂನ್‌ನಲ್ಲಿ ರಾಜ್ಯಮಟ್ಟದ ಕನಕೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಾ ಕುರುಬರ ಸಂಘದ ವತಿಯಿಂದ ಜೂನ್ ತಿಂಗಳ ಮೊದಲನೇ ಅಥವಾ ಎರಡನೇ ವಾರದಲ್ಲಿ ಮುಖ್ಯಮಂತ್ರಿಗಳು ನೀಡುವ ದಿನಾಂಕವನ್ನಾಧರಿಸಿ ಗದಗ ತಾಲೂಕಾ ಕುರುಬರ ಸಂಘದ ರಜತ ಮಹೋತ್ಸವ ಹಾಗೂ ರಾಜ್ಯಮಟ್ಟದ ಕನಕೋತ್ಸವ ಸಮಾರಂಭವನ್ನು ಆಯೋಜಿಸಲಾಗುತ್ತಿದೆ ಎಂದು ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕೀರಪ್ಪ ಹೆಬಸೂರು ಹೇಳಿದರು.

ನಗರದ ಪತ್ರಿಕಾ ಭವಾನದಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ತಾಲೂಕು ಸಂಘದ ರಜತ ಮಹೋತ್ಸವದ ಸವಿನೆನಪಿಗಾಗಿ ಸ್ಮರಣ ಸಂಚಿಕೆ ಬಿಡುಗಡೆ, ರಾಜ್ಯ ಮಟ್ಟದ ಕನಕೋತ್ಸವ ಹಾಗೂ ಫಕೀರಪ್ಪ ಹೆಬಸೂರ ಅವರ ಅಭಿನಂದನಾ ಗ್ರಂಥ ಸಮರ್ಪಣಾ ಸಮಾರಂಭ ನಡೆಯಲಿದೆ. ಕುಲಗುರು, ದಾಸವರೇಣ್ಯ, ಭಕ್ತ ಕನಕದಾಸರ ಆಶೀರ್ವಾದದಿಂದ ಗದಗ ತಾಲೂಕಾ ಸಂಘವು ಅನೇಕ ಜನಪರ ಹಾಗೂ ಸಮಾಜಪರ ಕಾರ್ಯಗಳ ಮೂಲಕ ಸಮಾಜ ಬಾಂಧವರಿಗೆ ಸ್ಪಂದಿಸಿದೆ ಎಂದು ಹೇಳಿದರು.

ಗದಗ ತಾಲೂಕು ಕುರುಬರ ಸಂಘದ ರಜತ ಮಹೋತ್ಸವ ಹಾಗೂ ರಾಜ್ಯ




ಮಟ್ಟದ ಕನಕೋತ್ಸವ ಕಾರ್ಯಕ್ರಮ ಅಭೂತಪೂರ್ವ ಯಶಸ್ಸಿನಲ್ಲಿ ಸಮುದಾಯದ ಪ್ರತಿಯೊಬ್ಬರ ಸಹಭಾಗಿತ್ವ ಹಾಗೂ ಸಹಕಾರ ಮುಖ್ಯವಾಗಿದೆ. ಹೀಗಾಗಿ ರಜತ ಮಹೋತ್ಸವದ ಸಂದರ್ಭದ ಸವಿನೆನಪಿನಗಾಗಿ ಸ್ಮರಣ ಸಂಚಿಕೆ ಹೊರತರಲಾಗುತ್ತಿದೆ. ಸ್ಮರಣ ಸಂಚಿಕೆಯಲ್ಲಿ ಸಂಘ ನಡೆದು ಬಂದ ಇತಿಹಾಸ, ಸಮಾಜದ ಧಾರ್ಮಿಕ ಪುರುಷರ ಲೇಖನಗಳನ್ನೊಳಗೊಂಡು ಜಾಹೀರಾತುಗಳನ್ನು ಪ್ರಕಟಿಸಲಾಗುತ್ತದೆ ಎಂದರು.

ರಜತ ಮಹೋತ್ಸವ ಸ್ವಾಗತ ಸಮಿತಿಯ ಗೌರವಾಧ್ಯಕ್ಷರನ್ನಾಗಿ ಮಾಜಿ ಸಚಿವ ಬಿ.ಆರ್. ಯಾವಗಲ್ ಮತ್ತು ಮಾಜಿ ಶಾಸಕ ಡಿ.ಆರ್. ಪಾಟೀಲರನ್ನು ನೇಮಿಸಲಾಗಿದೆ. ಅಧ್ಯಕ್ಷರಾಗಿ ರೋಣ ಮತಕ್ಷೇತ್ರದ ಶಾಸಕ, ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್. ಪಾಟೀಲ, ಕಾರ್ಯಾಧ್ಯಕ್ಷರನ್ನಾಗಿ ಸ್ಥಳೀಯ ನಗರಸಭೆ ಪ್ರಥಮಪ್ರಜೆ ಹಾಗೂ ಸಮಿತಿಯ ಸದಸ್ಯರನ್ನಾಗಿ ಮಾಜಿ ಶಾಸಕ ಜಿ.ಎಸ್ ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ರಾಜ್ಯ ಸಂಘದ ನಿರ್ದೇಶಕರುಗಳಾದ ಚೆನ್ನಮ್ಮ ಹುಳಕಣ್ಣವರ, ಕಳಕನಗೌಡ ಗೌಡರ, ಪ್ರಹ್ಲಾದ ಹೊಸಳ್ಳಿ, ತಾಲೂಕು ಘಟಕದ ಅಧ್ಯಕ್ಷ ನಾಗಪ್ಪ ಗುಗ್ಗರಿ, ನೀಲಪ್ಪ ಗುಡದಣ್ಣವರ, ಬಸವರಾಜ ಜಗ್ಗಲ, ಮಂಜುನಾಥ ಮುಂಡವಾಡ, ಶರಣಪ್ಪ ದೊಣ್ಣೆಗುಡ್ಡ, ಶೇಖಣ್ಣ ಕಾಳೆ, ಹೊನ್ನೇಶ ಪೋಟಿ ಇವರುಗಳನ್ನು ನೇಮಿಸಿ ವಿವಿಧ ಸಮಿತಿಗಳನ್ನು ರಚಿಸಲಾಗಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಆಂದಾನೆಪ್ಪ ವಿಭೂತಿ, ಡಾ. ಎಸ್.ಬಿ ಗೋವಿಂದಪ್ಪ, ರಾಮಚಂದ್ರ, ಮಾರುತಿ ಮಡ್ಡಿ, ಎಸ್.ಎಸ್. ಕರಡಿ, ಚಂದ್ರಣ್ಣ ಹುಬ್ಬಳ್ಳಿ, ಸಂಗು ಗೌಡರ, ಮಂಜುನಾಥ ಕುರಿ ಸೇರಿದಂತೆ ಇತರರಿದ್ದರು.

> ಸುಂದರ ವಿನ್ಯಾಸ ಹಾಗೂ ಮುದ್ರಣದ ಮೂಲಕ ಸಂಘದ ಉದ್ದೇಶ ಹಾಗೂ ಕಾರ್ಯಚಟುವಟಿಕೆಗಳನ್ನು ತಿಳಿಸುವ ಆಶಯ ಸ್ಮರಣ ಸಂಚಿಕೆಯದ್ದಾಗಿದೆ. ಸಮಾರಂಭವನ್ನು 2 ದಿನಗಳ ಕಾಲ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಿದ್ದು, ಕನಕದಾಸರ ಕುರಿತು ವಿಚಾರ ಗೋಷ್ಠಿಗಳು, ಸಮಾಜದ ನೌಕರ ಬಾಂಧವರ ಸಮಾವೇಶ, ಮಹಿಳಾ ಗೋಷ್ಠಿ, ಕನಕದಾಸರ ಕೀರ್ತನೆ, ಗಾಯನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುವವು. ಈ ಹಿನ್ನೆಲೆಯಲ್ಲಿ ಕನಕಭವನದಲ್ಲಿ ನಡೆದ ಜಿಲ್ಲಾ ಸಮಾಜ ಬಾಂಧವರ ಸಭೆಯಲ್ಲಿ ಕಾರ್ಯಕ್ರಮಗಳ ರೂಪುರೇಷೆ ಕುರಿತು ಚರ್ಚಿಸಿ ವಿವಿಧ ಸಮಿತಿಗಳನ್ನು ರಚಿಸಿಲಾಗಿದೆ ಎಂದು ಫಕೀರಪ್ಪ ಹೆಬಸೂರು ಹೇಳಿದರು.

## ಪಾದಯಾತ್ರಿ ಭಕ್ತಾಧಿಗಳ ಬೀಳ್ಕೊಡುಗೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿಯ ಯುವಕರ ತಂಡವು ಮುಂಡರಗಿ ತಾಲೂಕಿನ ಸುಪ್ರಸಿದ್ಧ ಸಿಂಗಟಾಲೂರ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಪಾದಯಾತ್ರೆಯನ್ನು ಕೈಗೊಂಡರು.

ಈ ಬಾರಿ ಗದಗ ಜಿಲ್ಲೆಗೆ ಉತ್ತಮ ಮಳೆ-ಬೆಳೆಯಾಗಿ ಎಲ್ಲರಿಗೂ ಒಳ್ಳೆಯ ಬದುಕು ಸಿಗಲೆಂದು ಪ್ರಾರ್ಥಿಸಿ ಕೈಗೊಂಡ ಈ ಪಾದಯಾತ್ರೆಯಲ್ಲಿ ರಾಜು ಹುಮನಬಾದಿ, ಶಶೀಧರ ವಡ್ಡಟ್ಟಿ, ಪ್ರಭು ಸಾವಕಾರ, ಕೊಟ್ರೇಶ್ ಮತ್ತೂರು, ಕುಮಾರಸ್ವಾಮಿ ಹಿರೇಮಠ ಮುಂತಾದವರಿದ್ದರು. ಈ ತಂಡಕ್ಕೆ ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ಶುಭ ಕೋರಿ ಬೀಳ್ಕೊಟ್ಟರು.

**ಬಿ.ಜಿ. ಅಣ್ಣಿಗೇರಿ ಗುರುಗಳ ಆಧ್ಯಾತ್ಮಿಕ-ಶೈಕ್ಷಣಿಕ ಚಿಂತನ ಮಾಲಿಕೆ ಕಾರ್ಯಕ್ರಮದಲ್ಲಿ ಪ್ರೊ. ಶಿವಾನಂದ ಪಟ್ಟಣಶೆಟ್ಟಿ**

# ಅಣ್ಣಿಗೇರಿಯವರ ಶೈಕ್ಷಣಿಕ ಕೊಡುಗೆ ಅನುಪಮ

■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣ ಪ್ರೇಮಿ, ತ್ಯಾಗಜೀವಿ ದಿ. ಬಿ.ಜಿ. ಅಣ್ಣಿಗೇರಿ ಗುರುಗಳು ವ್ಯಕ್ತಿಯಲ್ಲ, ಶಕ್ತಿಯಾದವರು. ಗದಗ ಪರಿಸರದ ಶಿಕ್ಷಣ ಕ್ಷೇತ್ರದಲ್ಲಿ ಅನುಪಮ ಸೇವೆ ಮತ್ತು ಕೊಡುಗೆ ನೀಡಿದ ಮಹನೀಯರಾಗಿದ್ದರು ಎಂದು ಗದುಗಿನ ತೋಂಟದಾರ್ಯ ವಿದ್ಯಾಪೀಠದ ಆಡಳಿತಾಧಿಕಾರಿ ಪ್ರೊ. ಶಿವಾನಂದ ಪಟ್ಟಣಶೆಟ್ಟಿ ಅಭಿಪ್ರಾಯಪಟ್ಟರು.

ಅವರು ಶನಿವಾರ ಗದುಗಿನ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಏರ್ಪಡಿಸಿದ್ದ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಆಧ್ಯಾತ್ಮಿಕ ಮತ್ತು ಶೈಕ್ಷಣಿಕ ಚಿಂತನ ಮಾಲಿಕೆ-67ರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಶಿಕ್ಷಕರಾಗಿ, ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿದ ಅಣ್ಣಿಗೇರಿ ಅವರು ಅವಿವಾಹಿತರಾಗಿ ಸರಳ ಮತ್ತು ಶಿಸ್ತಿನ ಜೀವನ ನಡೆಸಿದವರು.




ವಿದ್ಯಾರ್ಥಿಗಳಿಗೆ ವಿದ್ಯಾರ್ಥಿಗಳಿಗೆ ಉಚಿತ ಟ್ಯೂಶನ್ ಹೇಳಿ ಸಂತೃಪ್ತಭಾವ ಹೊಂದಿದವರು. ಇವರಲ್ಲಿ ಟ್ಯೂಶನ್ ಪಡೆದವರು ಭವಿಷ್ಯದಲ್ಲಿ ದೊಡ್ಡ ಸ್ಥಾನದಲ್ಲಿದ್ದಾರೆ ಎಂದರು.

ಆಶ್ರಮದಲ್ಲಿ ಶಿಕ್ಷಣ ದಾಸೋಹ ನಿತ್ಯ ನಿರಂತರವಾಗಿರಲಿ. ಪ್ರತಿಭಾ ಪ್ರತಿಷ್ಠಾನದ ಸೇವೆ ಮುನ್ನಡೆಯಲಿ. ವಿದ್ಯಾರ್ಥಿಗಳ ಜೀವನ ಉಜ್ವಲವಾಗಲಿ. ತನ್ಮೂಲಕ ಗುರುಗಳನ್ನು ಸ್ಮರಿಸುವ ಕಾರ್ಯ ನಡೆಯಲಿ ಎಂದರು.

ಇನ್ನೋರ್ವ ಮುಖ್ಯ ಅತಿಥಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷ ಬಿ.ಬಿ. ಅಸೂಟಿ ಅಣ್ಣಿಗೇರಿ ಅವರ ವ್ಯಕ್ತಿತ್ವ, ಶಿಕ್ಷಣ ರಂಗಕ್ಕೆ ಅವರ ಕೊಡುಗೆಯನ್ನು ಶ್ಲಾಘಿಸಿದರು.

ಗುತ್ತಿಗೆದಾರರ ಸಂಘದ ಜಿಲ್ಲಾಧ್ಯಕ್ಷ ಸಿದ್ಧಲಿಂಗನಗೌಡ ಪಾಟೀಲ, ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ ಮಾತನಾಡಿದರು.

ಸಮಾರಂಭದಲ್ಲಿ ಪ್ರೊ. ಶಿವಾನಂದ ಪಟ್ಟಣಶೆಟ್ಟಿ ಅವರನ್ನು ಸನ್ಮಾನಿಸಲಾಯಿತು. ಪ್ರಾರಂಭದಲ್ಲಿ ಪಾವನಿ ಪ್ರಾರ್ಥಿಸಿದರು ಡಾ. ಬಸಯ್ಯ ಬೆಳ್ಳೇರಿಮಠ ಸ್ವಾಗತಿಸಿದರು. ಕಳಕಪ್ಪ ಕುರ್ತಕೋಟಿ ನಿರೂಪಿಸಿದರೆ, ರವಿ ದಂಡಿನ ವಂದಿಸಿದರು. ವೇದಿಕೆಯ ಮೇಲೆ ವಿಜಯಲಕ್ಷ್ಮೀ ಅಂಗಡಿ, ಆಂಜನೇಯ ಕಟಗಿ, ಡಾ. ಶರಣಬಸವ ಚೌಕಿಮಠ, ಡಾ. ಬಸವರಾಜ ಚನ್ನಪ್ಪಗೌಡರ ಉಪಸ್ಥಿತರಿದ್ದರು. ಪ್ರಸಾದ ಸೇವೆಯನ್ನು ಆಶ್ರಮದ ಹಳೆಯ ವಿದ್ಯಾರ್ಥಿ ರಾಜಶೇಖರ ಹೊನ್ನಳ್ಳಿ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಶಿಕ್ಷಕಿಯರಾದ ಮಂಜುಳಾ ತುಮ್ಮರಮಟ್ಟಿ, ಹುಲಿಗೆಮ್ಮ ಹಂಚಿನಾಳ, ಜ್ಯೋತಿ ವಡಗೇರಿ, ಶಿಕ್ಷಕರಾದ ಸಂತೋಷ ಹಾದಿ, ಗುರುರಾಜ ಅಣ್ಣಿಗೇರಿ, ಇಬ್ರಾಹಿಮ್, ಸಿದ್ದಣ್ಣ ಕವಲೂರ, ತೋಂಟೇಶ ವೀರಲಿಂಗಯ್ಯನಮಠ ಸೇರಿದಂತೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

> ಅಣ್ಣಿಗೇರಿ ಅವರ ವ್ಯಕ್ತಿತ್ವ ನೋಡಿದರೆ ಕೆಎಲ್‌ಇ ಸಪ್ತರ್ಷಿಗಳು ಹಾಗೂ ಶಿರಸಂಗಿ ಲಿಂಗರಾಜರ ಪ್ರತಿಭಾ ಪುರಸ್ಕಾರ ನೆನಪಾಗುವದು. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ದೊಡ್ಡ ಮೊತ್ತದ ಪುರಸ್ಕಾರ ನೀಡಲಾಗುತ್ತಿದೆ. ವಿಶೇಷವಾಗಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ವಿಶೇಷ ಆದ್ಯತೆ ನೀಡುತ್ತಿರುವದು ಅಭಿನಂದನೀಯ. ಶಿಕ್ಷಣದೊಂದಿಗೆ ಸಂಸ್ಕಾರ, ಸಂಸ್ಕೃತಿಯನ್ನೂ ರೂಢಿಸುವದು ಅವಶ್ಯವಿದೆ ಎಂದು ಪ್ರೊ. ಶಿವಾನಂದ ಪಟ್ಟಣಶೆಟ್ಟಿ ಹೇಳಿದರು.

**ರಾಜ್ಯ ಸರ್ಕಾರದ ಮಂತ್ರಿಗಳಲ್ಲಿ ಲಂಚ ಪಡೆಯಲು ಪೈಪೋಟಿ-ಬಸವರಾಜ್ ಬೊಮ್ಮಾಯಿ ಆರೋಪ**

# ರಾಜ್ಯದಲ್ಲಿ 50 ಪರ್ಸೆಂಟ್ ಭ್ರಷ್ಟಾಚಾರ ನಡೆಯುತ್ತಿದೆ

■ವಿಜಯಸಾಕ್ಷಿ ಸುದ್ದಿ, ಗಜೇಂದಗಡ

ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಎಲ್ಲ ಇಲಾಖೆಗಳಲ್ಲಿಯೂ ಐವತ್ತು ಪರ್ಸೆಂಟ್ ಭ್ರಷ್ಟಾಚಾರ ನಡೆಯುತ್ತಿದೆ. ಮಂತ್ರಿಗಳಲ್ಲಿ ಲಂಚ ಪಡೆಯಲು ಪೈಪೋಟಿ ನಡೆಯುತ್ತಿದೆ. ನಾವು ಹೆಚ್ಚು ಕೆಲಸ ಮಾಡಲು ಪೈಪೋಟಿ ನಡೆಸಿದ್ದೇವು. ಇವರು ಹೆಚ್ಚು ಲಂಚ ಪಡೆಯಲು ಪೈಪೋಟಿ ನಡೆಸಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಶನಿವಾರ ಗಜೇಂದ್ರಗಡ ಪಟ್ಟಣದಲ್ಲಿ ಭಾರತೀಯ ಜನತಾ ಪಾರ್ಟಿ ರೋಣ ಮಂಡಲದ ವತಿಯಿಂದ ಏರ್ಪಡಿಸಿದ್ದ ರೋಣ ಮಂಡಲ ಮತ್ತು ಮೋರ್ಚಾಗಳ ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ನಿಕಟ ಪೂರ್ವ ಪದಾಧಿಕಾರಿಗಳಿಗೆ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ರೋಣ ಮಂಡಳದ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಉಮೇಶ್ ಮಲ್ಲಾಪುರ ಅವರಿಗೆ ಅಭಿನಂದನೆಗಳು. ಅವರ ಅವಧಿಯಲ್ಲಿ ಪಕ್ಷ ಬಲಿಷ್ಠವಾಗಿ ಬೆಳೆದು, ತಾಲೂಕು, ಜಿಲ್ಲಾ ಪಂಚಾಯತಿ ಚುನಾವಣೆ ಅಷ್ಟೇ ಅಲ್ಲದೇ ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಜಯಭೇರಿ ಭಾರಿಸುವಂತಾಗಲಿ ಎಂದು ಆಶಿಸಿದರು.



ಹಿಂದಿನ ಅಧ್ಯಕ್ಷ ಮುತ್ತಣ್ಣ ಅವರ ಅವಧಿಯಲ್ಲಿ ಪಕ್ಷವನ್ನು ಬಲಿಷ್ಠವಾಗಿ ಕಟ್ಟಲಾಗಿದೆ. ಅವರ ಸೇವೆಯನ್ನು ಪಕ್ಷ ಗುರುತಿಸುತ್ತದೆ. ರೋಣ ಮತಕ್ಷೇತ್ರ ತನ್ನದೇ ಆದ ವೈಶಿಷ್ಟ್ಯದಿಂದ ಕೂಡಿದೆ. ಗಂಡು ಮೆಟ್ಟಿನ ಸ್ಥಳ. ಇಲ್ಲಿನ ಜನರು ಬಹಳ ನಿರ್ಣಾಯಕವಾಗಿ ತೀರ್ಪು ಹೇಳುತ್ತಾರೆ. ಕಳೆದ ಚುನಾವಣೆಗೂ ಮುಂಚೆ ನಾವು ಹಿಂದೆಂದು ಮಾಡಿರದ ಅಭಿವೃದ್ಧಿ ಮಾಡಿದ್ದೇವು. ಕುಡಿಯುವ ನೀರು, ನೀರಾವರಿ, ಶಾಲೆ, ರಸ್ತೆ ಅಭಿವೃದ್ಧಿ ಮಾಡಿ ಒಳ್ಳೆಯ ಆಡಳಿತ ನೀಡಿದರೂ ರಾಜಕಾರಣದಲ್ಲಿ ಅಂತಿಮ ಕ್ಷಣದಲ್ಲಿ ನಾವು ತೆಗೆದುಕೊಂಡ ನಿರ್ಣಯದಿಂದ ನಮಗೆ ಹಿನ್ನಡೆಯಾಗಿದೆ ಎಂದರು.

ಯಾವ ಭರವಸೆಯಿಂದ ಜನರು ಕಾಂಗ್ರೆಸನ್ನು ಆಯ್ಕೆ ಮಾಡಿದ್ದರೊ ಆ ಭರವಸೆಗಳು ಈಡೇರದೆ ಭ್ರಮನಿರಸನಗೊಂಡಿದ್ದಾರೆ. ಇದು ರೈತ ವಿರೋಧಿ ಸರ್ಕಾರ, ಶ್ರಮ ವಹಿಸಿ ದುಡಿಯುವವರಿಗೆ ಉದ್ಯೋಗವಿಲ್ಲ. ಮಹಿಳೆಯರಿಗೆ ಸುರಕ್ಷತೆ ಇಲ್ಲ. ಇಡೀ ಕರ್ನಾಟಕವನ್ನು ಸಾಲದ ಶೂಲಕ್ಕೆ ಸಿಲುಕಿಸಿದ್ದಾರೆ. ಪ್ರತಿಯೊಬ್ಬ ಕನ್ನಡಿಗರ ಮೇಲೆ ಒಂದು ಲಕ್ಷ ರೂ. ಸಾಲ ಇದೆ. ಸ್ವಾತಂತ್ರ್ಯ ಬಂದ ಮೇಲೆ ರಾಜ್ಯದ ಸಾಲ 7 ಲಕ್ಷ ಕೋಟಿ ಇತ್ತು. ಅದರಲ್ಲಿ ಸಿದ್ದರಾಮಯ್ಯ ಅವರು ನಾಲ್ಕು ಲಕ್ಷ ಕೋಟಿ ರೂ. ಸಾಲ ಮಾಡಿದ್ದಾರೆ. ಅತಿ ಹೆಚ್ಚು ಸಾಲ ಮಾಡಿದ್ದ ಶ್ರೇಯಸ್ಸು ಸಿದ್ದರಾಮಯ್ಯ ಅವರಿಗೆ ಸಲ್ಲುತ್ತದೆ ಎಂದರು.

ಮಂಡಲ್ ಆಯೋಗದ ವರದಿ ಬಂದು ಇಪ್ಪತ್ತು ವರ್ಷ ಆಗಿತ್ತು. ಕಾಂಗ್ರೆಸ್ ಅದನ್ನು ಹಾಗೆ ಇಟ್ಟುಕೊಂಡಿತ್ತು. ನಮ್ಮ ಸರ್ಕಾರ ಬಂದ ಮೇಲೆ ಕೇಂದ್ರ ಹಾಗೂ ಎಲ್ಲ ರಾಜ್ಯಗಳಲ್ಲಿ ಶಾಸ್ವತ ಹಿಂದುಳಿದ ವರ್ಗಗಳ ಆಯೋಗ ರಚನೆ ಮಾಡಿ ಸಂವಿಧಾನಿಕ ಮಾನ್ಯತೆ ನೀಡಿದರು. ಎಸ್ಸಿ ಎಸ್ಟಿ ಸಮುದಾಯಕ್ಕೆ ಸಿದ್ದರಾಮಯ್ಯ ಸರ್ಕಾರ ಅನ್ಯಾಯ ಮಾಡಿದೆ. ಬರೀ ಬಾಯಿ ಮಾತಲ್ಲಿ ಮಾತ್ರ ಸಾಮಾಜಿಕ ನ್ಯಾಯ, ಹಿಂದುಳಿದ ವರ್ಗಗಳಿಗೂ ಅನ್ಯಾಯ ಮಾಡಿದ್ದಾರೆ. ಶೇ 50 ರಷ್ಟು ಹಣವನ್ನೂ ಖರ್ಚು ಮಾಡಿಲ್ಲ. ಚುನಾವಣೆಯ ಸಂದರ್ಭದಲ್ಲಿ ಒಳ ಮೀಸಲಾತಿ ಜಾರಿ ಮಾಡುತ್ತೇವೆ ಎಂದು ಹೇಳಿದ್ದರು. ಆದರೆ, ಇದುವರೆಗೂ ಮಾಡಿಲ್ಲ. ಅತ್ಯಂತ ಕೆಳ ಸ್ಥರದಲ್ಲಿರುವ ಸಮುದಾಯಗಳ ಈ ಸರ್ಕಾರ ಕಣ್ಣಿಗೆ ಮಣ್ಣೆರಚುವ ಕೆಲಸ ಮಾಡುತ್ತಿದೆ. ಈ ಎಲ್ಲ ವಿಚಾರಗಳನ್ನು ಜನರ ಬಳಿಗೆ ತೆಗೆದುಕೊಂಡು ಹೋಗಿ ಜನರಿಗೆ ಸತ್ಯ ಹೇಳಿ ಜಾಗೃತಿ ಮೂಡಿಸಿ ಜನರಿಗೆ ನ್ಯಾಯ ಹಾಗೂ ಅನುಕೂಲ ಮಾಡಿಕೊಡಲು ಬಿಜೆಪಿ ಮುಂಚೂಣಿಯಲ್ಲಿ ನಿಲ್ಲಬೇಕು. ರೋಣ ತಾಲೂಕಿನಲ್ಲಿ ನೂತನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಹಿಂದಿನ ಪದಾಧಿಕಾರಿಗಳನ್ನೂ ಸೇರಿಸಿಕೊಂಡು ಕಳಕಪ್ಪ ಬಂಡಿಯವರ ನಾಯಕತ್ವದಲ್ಲಿ ಮಾಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಕಳಕಪ್ಪ ಬಂಡಿ ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷ ರಾಜು ಕುರಡಗಿ, ನೂತನ ಮಂಡಲದ ಅಧ್ಯಕ್ಷ ಉಮೇಶ ಮಲ್ಲಾಪೂರ, ನಿಕಟಪೂರ್ವ ಮಂಡಲದ ಅಧ್ಯಕ್ಷ ಮುತ್ತು ಕಡಗದ ಮುಖಂಡರಾದ ನಿಂಗಪ್ಪ ಕೆಂಗಾರ, ಅಶೋಕ ನವಲಗುಂದ, ಬಿ.ಎಂ ಸಜ್ಜನರ, ಶಿವಾನಂದ ಮಠದ ಸೇರಿದಂತೆ ಪಕ್ಷದ ಹಲವಾರು ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು. ಇದೇ ವೇಳೆ ಕುರುಬ ಸಮುದಾಯದ 10 ಜನ ಮುಖಂಡರು ಕಾಂಗ್ರೆಸ್ ಪಕ್ಷ ತೊರೆದು ಬಿ.ಜೆ.ಪಿ ಸೇರ್ಪಡೆಯಾದರು.

> **ಐದು ವರ್ಷಕ್ಕಿಂತ ಮುಂಚೆ ರೊಟ್ಟಿ ತಿರುವಿ ಹಾಕಿ**
>
> ರೋಣ ತಾಲೂಕಿನ ಜನರು ಮನಸ್ಸು ಮಾಡಿದರೆ ರೊಟ್ಟಿ ತಿರುವಿ ಹಾಕಿದಂತೆ, ಐದು ವರ್ಷ ಕಾಯುವಂತಿಲ್ಲ. ಅದಕ್ಕೂ ಮುಂಚೆಯೇ ರೊಟ್ಟಿ ತಿರುವಿ ಹಾಕುವ ಪ್ರಸಂಗ ಬರುತ್ತದೆ. ಮತ್ತೊಮ್ಮೆ ಕಳಕಪ್ಪ ಬಂಡಿಯವರನ್ನು ಶಾಸಕರನ್ನಾಗಿ ಮಾಡಬೇಕು. ಎಲ್ಲಿಯವರೆಗೂ ಕಳಕಪ್ಪ ಬಂಡಿಯನ್ನು ಶಾಸಕರನ್ನಾಗಿ ಮಾಡುವುದಿಲ್ಲವೋ ಅಲ್ಲಿಯವರೆಗೂ ವಿರಮಿಸುವುದಿಲ್ಲ. ಈ ತಾಲೂಕಿನಲ್ಲಿ ಆಗಿರುವ ಬದಲಾವಣೆ ರಾಜ್ಯದ ಎಲ್ಲ ತಾಲೂಕುಗಳಲ್ಲಿ ಮಾಡಿ, ಎಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡೋಣ ಎಂದು ಹೇಳಿದರು.

## ಬೆಲೆ ಏರಿಕೆ ಖಂಡಿಸಿ ಮುಖ್ಯಮಂತ್ರಿಗಳಿಗೆ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರವು ಹಾಲು, ವಿದ್ಯುತ್, ಡಿಸೈಲ್, ಪೆಟ್ರೋಲ್, ಟೋಲ್ ತೆರಿಗೆ, ಬಾಂಡ್ ಪೇಪರ್, ಆಸ್ತಿ ನೋಂದಣಿ ಇತ್ಯಾದಿ ದರ, ಶುಲ್ಕಗಳಲ್ಲಿ ಹೆಚ್ಚಳ ಮಾಡಿರುವುದನ್ನು ವಿರೋಧಿಸಿ ನವ ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆಯ ರಾಜ್ಯಾಧ್ಯಕ್ಷ ಪಿ. ಸುಬ್ರಮಣ್ಯಂರೆಡ್ಡಿಯವರ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ವೇದಿಕೆಯ ಕಾರ್ಮಿಕ ಘಟಕದ ರಾಜ್ಯಾಧ್ಯಕ್ಷ ಶಿವಾನಂದಯ್ಯ ಹಿರೇಮಠ, ರಾಜ್ಯ ಸರ್ಕಾರವು ಇವುಗಳ ದರದಲ್ಲಿ ಏರಿಕೆ ಮಾಡಿರುವುದರಿಂದ ಬಡವರಿಗೆ, ಮಧ್ಯಮ ವರ್ಗದ ಮತ್ತು ಗ್ರಾಮೀಣ ಜನತೆಗೆ ಆರ್ಥಿಕ ತೊಂದರೆಯನ್ನುಂಟುಮಾಡಿದೆ. ರಾಜ್ಯ ಸರ್ಕಾರ ಈ ಕೂಡಲೇ ಈ ಎಲ್ಲ ಬೆಲೆ ಏರಿಕೆಗಳನ್ನು ಕಡಿಮೆ ಮಾಡಿ ಜನತೆಗೆ ನೆಮ್ಮದಿಯ ಜೀವನ ಸಾಗಿಸುವಂತೆ ಅನುಕೂಲ ಮಾಡಬೇಕೆಂದು ಹೇಳಿದರು.

ಜಿಲ್ಲಾಧ್ಯಕ್ಷ ಶಿವಕುಮಾರ ರಾಮನಕೊಪ್ಪ ಮಾತನಾಡಿ, ರಾಜ್ಯ ಸರ್ಕಾರ ಬೆಲೆ ಏರಿಕೆಗಳನ್ನು ಕಡಿಮೆಗೊಳಿಸದಿದ್ದರೆ ರಾಜ್ಯದ ಎಲ್ಲ ಕನ್ನಡಪರ ಹಾಗೂ ವಿವಿಧ ಸಂಘಟನೆಗಳು ಹೋರಾಟವನ್ನು ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ರಾಜ್ಯ ರೈತ ಘಟಕದ ಅಧ್ಯಕ್ಷ ಶಿವಾನಂದ ಪಲ್ಲೇದ, ರಾಜ್ಯ ಪ್ರಧಾನ ಕಾರ್ಯದರ್ಶಿ ಯು.ಆರ್. ಭೂಸನೂರಮಠ, ರಾಜ್ಯ ಸಂಚಾಲಕ ಪ್ರಭಾಕರ ಹೆಬಸೂರ, ರಾಜ್ಯ ವಕ್ತಾರ ಎಂ.ಎಸ್. ಪರ್ವತಗೌಡ್ರ, ಜಿಲ್ಲಾ ಕಾರ್ಯದರ್ಶಿ ಷಣ್ಮುಖ ಸುಲಾಖೆ ಮುಂತಾದವರು ಉಪಸ್ಥಿತರಿದ್ದರು.

## 'ಸಾರ್ವಜನಿಕ ಸುರಕ್ಷಾ ಕಾಯ್ದೆ' ಅರಿವು ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಸಾರ್ವಜನಿಕ ಸುರಕ್ಷಾ ಕಾಯ್ದೆಯ ಕುರಿತು ಜನರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಗದಗ ಜಿಲ್ಲಾ ಪೊಲೀಸ್ ವತಿಯಿಂದ ನಗರದ ಪೊಲೀಸ್ ಭವನದಲ್ಲಿ ಜಾಗೃತಿ ಸಭೆ ಹಮ್ಮಿಕೊಳ್ಳಲಾಗಿತ್ತು.

ಸಭೆಯನ್ನುದ್ದೇಶಿಸಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ, ಸಾರ್ವಜನಿಕ ಸುರಕ್ಷಾ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಾರ್ವಜನಿಕರ ಸಹಭಾಗಿತ್ವ ಅಗತ್ಯವಾಗಿದೆ.

ಆಯಕಟ್ಟಿನ ಸ್ಥಳದಲ್ಲಿ ಸಾರ್ವಜನಿಕರು ಸಿಸಿ ಟಿವಿ ಅಳವಡಿಸಲು ಮನವಿ ಮಾಡಲಾಗಿತ್ತು. ಅಂತೆಯೇ



ಸಾರ್ವಜನಿಕಕು ಖಾಸಗಿ ಅಂಗಡಿ, ರಸ್ತೆ ಪಕ್ಕದ ಮನೆಗಳಲ್ಲಿ ಸಿಸಿ ಟಿವಿ ಅಳವಡಿಸಿದ್ದಾರೆ. ಅವಳಿ ನಗರದ ಪ್ರಮುಖ ರಸ್ತೆಗಳಲ್ಲಿ ಈ ಮೊದಲು ಸಾವಿರ ಇದ್ದ ಸಿಸಿ ಟಿವಿಗಳು ಈಗ ಮೂರು ಸಾವಿರ ದಾಟಿವೆ. ಎಪ್ರಿಲ್ ತಿಂಗಳಾತ್ಯದವರೆಗೆ ನಾಲ್ಕು ಸಾವಿರ ಸಿಸಿ ಟಿವಿ ಅಳವಡಿಸಲು ಜನರಿಗೆ ಕರೆ ನೀಡಿದ್ದೇವೆ. ಜನರಿಂದಲೂ ಉತ್ತಮ ಪ್ರತಿಕ್ರಿಯೆ ಸಿಕ್ಕಿದೆ, ಮುಂದೆಯೂ ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಅವಳಿ ನಗರದ ವಿವಿಧ ಸಂಘಟನೆಗಳು, ಸಾರ್ವಜನಿಕರು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಡಿಸಿಪಿ ಅನಿತಾ ಹದ್ದಣ್ಣವರರಿಗೆ ಅಭಿನಂದನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಬಾಲ್ಯದಿಂದಲೂ ಸರಳ ಮತ್ತು ಸ್ನೇಹಮಯಿ ವ್ಯಕ್ತಿತ್ವ ಹೊಂದಿರುವ ಅನಿತಾ ಹದ್ದಣ್ಣವರ ಕೆಎಎಸ್ ಪರೀಕ್ಷೆ ಉತ್ತೀರ್ಣರಾಗಿ 2006ರಲ್ಲಿ ಡಿವೈಎಸ್‌ಪಿ ಹುದ್ದೆಯನ್ನು ಪಡೆದು, ಸದ್ಯ ಬೆಂಗಳೂರಿನ ಪಶ್ಚಿಮ ವಿಭಾಗದ ಟ್ರಾಫಿಕ್ ಡಿಸಿಪಿ ಹುದ್ದೆಯಲ್ಲಿದ್ದಾರೆ.

ಅವರು ಪ್ರಸಕ್ತ ಸಾಲಿನ ಮುಖ್ಯಮಂತ್ರಿ ಪದಕವನ್ನು ಪಡೆದುಕೊಂಡಿದ್ದು, ಈ ಗೌರವಕ್ಕೆ ಭಾಜನರಾದ ಡಿಸಿಪಿ ಅನಿತಾ ಹದ್ದಣ್ಣವರವರನ್ನು ಅರವಿಂದ ಹುಲ್ಲೂರ, ಮಂಜುನಾಥ ಮ್ಯಾಗೇರಿ, ಗದಗ-ಬೆಟಗೇರಿ ಹೆಲ್ತ್ ಕ್ಯಾಂಪ್ ಯುವಕ ಸಂಘ, ಮಹಿಳಾ ಸಂಘ-ಸಂಸ್ಥೆಗಳು ಹಾಗೂ ಸಾರ್ವಜನಿಕರು ಅಭಿನಂದಿಸಿದ್ದಾರೆ.

## ರಾಷ್ಟ್ರೀಯ ಭೂಮಾಪನ ದಿನಾಚರಣೆ ಎ.10ಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

36ನೇ ರಾಷ್ಟ್ರೀಯ ಭೂಮಾಪನ ದಿನಾಚರಣೆಯನ್ನು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕಂದಾಯ ಸಚಿವ ಕೃಷ್ಣ ಭೈರೇಗೌಡ ಇವರುಗಳ ಉಪಸ್ಥಿತಿಯಲ್ಲಿ ಎಪ್ರಿಲ್ 10ರಂದು ವಿಧಾನಸೌಧದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ದೈಹಿಕ ಶಿಕ್ಷಣ ಶಿಕ್ಷಕರ ಕಾರ್ಯಾಗಾರದಲ್ಲಿ ಯುವ ಕಾಂಗ್ರೆಸ್ ಕಮಿಟಿ ಅಧ್ಯಕ್ಷ ಕೃಷ್ಣಗೌಡ ಪಾಟೀಲ

# ಮಕ್ಕಳಿಗೆ ಶಿಸ್ತುಬದ್ಧ ಜೀವನ ಕಲಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಚಿಕ್ಕ ವಯಸ್ಸಿನಲ್ಲಿಯೇ ಮಕ್ಕಳು ಸಣ್ಣಪುಟ್ಟ ವಿಷಯಗಳಿಗೆ ಮಾನಸಿಕ ಖಿನ್ನತೆಯಿಂದ ಬಳಲುತ್ತಿದ್ದಾರೆ. ಇದರಿಂದ ಮುಕ್ತವಾಗಲು ದೈಹಿಕ ಶಿಕ್ಷಣ ಸಹಕಾರಿಯಾಗಿದೆ ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಕಮಿಟಿ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಅಭಿಪ್ರಾಯಪಟ್ಟರು.

ಅವರ ಹುಲಕೋಟಿಯ ಸ್ವಾಮಿ ವಿವೇಕಾನಂದ ಪದವಿಪೂರ್ವ ಮಹಾವಿದ್ಯಾಲಯದ ಆಡಿಟೋರಿಯಂ ಹಾಲ್‌ನಲ್ಲಿ ಜಿಲ್ಲಾ ಪಂಚಾಯಿತಿ, ಗದಗ ಶಾಲಾ ಶಿಕ್ಷಣ ಇಲಾಖೆ, ಕರ್ನಾಟಕ ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಜಿಲ್ಲಾ ಶಾಖೆ ಗದಗ, ಕರ್ನಾಟಕ ರಾಜ್ಯ ಸರಕಾರಿ ಗ್ರೇಡ್-1 ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಗದಗ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಗ್ರೇಡ್-2 ಗದಗ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ 2025-26ನೇ ಸಾಲಿನ ಗದಗ ಜಿಲ್ಲಾ ಮಟ್ಟದ ದೈಹಿಕ ಶಿಕ್ಷಣ ಶಿಕ್ಷಕರ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಮಕ್ಕಳಲ್ಲಿನ ಈ ಖಿನ್ನತೆಗೆ ದುಶ್ಚಟಗಳು, ಪಾಲಕರ ನಡುವಳಿಕೆ, ನಿರ್ಲಕ್ಷ್ಯ ಮತ್ತು ಸಮಾಜದಲ್ಲಿನ ಕೆಲವು ಬದಲಾವಣೆಗಳು ಕಾರಣವಾಗಬಹುದು. ಇದರಿಂದ ಮಕ್ಕಳು ಹೊರಬರಲು ದೈಹಿಕ ಶಿಕ್ಷಣ ಶಿಕ್ಷಕರು ವಯಕ್ತಿಕ



ಕಾಳಜಿ ವಹಿಸಿ ದೈಹಿಕ ಶಿಕ್ಷಣದ ಪ್ರಾಮುಖ್ಯತೆ ಬಗ್ಗೆ ತಿಳಿಸಿ ಸಮಯ ಪ್ರಜ್ಞೆ, ಸ್ವಚ್ಛತೆ, ಪ್ರಾಮಾಣಿಕತೆ, ಶಿಸ್ತುಬದ್ಧ ಜೀವನ ನಡೆಸುವಂತೆ ಬೋಧನೆ ಮಾಡಿದಾಗ ಮಾತ್ರ ಸರ್ವಾಂಗೀಣ ಬೆಳವಣಿಗೆ ಮತ್ತು ಒಳ್ಳೆಯ ಜೀವನ ನಡೆಸಲು ಸಾಧ್ಯ ಎಂದರು.

ಮುಖ್ಯ ಅತಿಥಿಗಳಾಗಿ ಹುಲಕೋಟಿ ಗ್ರಾ.ಪಂ ಅಧ್ಯಕ್ಷರಾದ ನಾಗರತ್ನ ಬಾಳೆಹಳ್ಳಿಮಠ, ಡಾ. ಶೇಖರ ಸಜ್ಜನರ, ಡೈಟ್ ಪ್ರಾಚಾರ್ಯ ಜಿ.ಎಲ್. ಬಾರಾಟಕ್ಕೆ, ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಗದಗ ಜಿಲ್ಲಾಧ್ಯಕ್ಷ ಬಿ.ಎಫ್. ಪೂಜಾರ, ಮಾಧ್ಯಮಿಕ ಶಾಲಾ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ ಎಂ.ಕೆ. ಲಮಾಣಿ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಗದಗ ಜಿಲ್ಲಾಧ್ಯಕ್ಷ ವ್ಹಿ.ಎಂ. ಹಿರೇಮಠ, ರವಿ ದಂಡಿನ, ಸಿ.ಬಿ. ಕರಿಕಟ್ಟಿ, ಮೋಹನ ದುರಗಣ್ಣವರ, ಏಕನಾಥಗೌಡ್ರ ಕರಿರಾಯನಗೌಡ್ರ, ಬಿ.ಕೆ. ನಿಂಬನಗೌಡ್ರ, ವಸಂತ ಕಲಕಂಬಿ, ರಾಜು ಚವ್ಹಾಣ, ಶರಣಪ್ಪ ನಾಗರಹಳ್ಳಿ, ಎಸ್.ಆರ್. ಬಂಡಿ, ಅವರಡ್ಡಿ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎಂ.ಎಂ. ಹವಳದ, ಗದಗ ಗ್ರಾಮೀಣ ದೈಹಿಕ ಶಿಕ್ಷಣಾಧಿಕಾರಿ ಟಿ.ಎಸ್. ಪವಾರ, ಗದಗ ಶಹರ ದೈಹಿಕ ಶಿಕ್ಷಣಾಧಿಕಾರಿ ಜೆ.ಬಿ. ಅಣ್ಣಿಗೇರಿ, ಎನ್.ಆರ್. ನಿಡಗುಂದಿ, ಬಸವಣ್ಣೆಪ್ಪ ಬಿ.ಮುಂಡರಗಿ, ಆರ್.ಎಸ್. ನರೇಗಲ್ ಮುಂತಾದವರು ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಆರ್.ಎಸ್. ಬುರಡಿ, 2025-26ನೇ ಸಾಲಿನ ದೈಹಿಕ ಶಿಕ್ಷಣದ ಕ್ರೀಡಾ ಚಟುವಟಿಕೆಗಳು ಹೇಗಿರಬೇಕು ಎಂಬ ದೃಷ್ಟಿಕೋನವನ್ನು ಸಿದ್ಧಪಡಿಸಿಕೊಳ್ಳುವ ನಿಟ್ಟಿನಲ್ಲಿ ಈ ಕಾರ್ಯಗಾರ ಆಯೋಜನೆ ಮಾಡಲಾಗಿದೆ. ಮಕ್ಕಳಲ್ಲಿ ಸರ್ವಾಂಗೀಣ ಬೆಳವಣಿಗೆ, ನಾಯಕತ್ವ ಗುಣ ಬೆಳೆಸುವದು, ಸೋಲನ್ನು ಒಪ್ಪಿಕೊಳ್ಳುವ ಮನೋಭಾವ ಬೆಳೆಸಿ, ಅವರ ಜೀವನದ ಆಮೂಲಾಗ್ರ ಬದಲಾವಣೆ ಮಾಡುವಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಪಾತ್ರ ಮುಖ್ಯವಾಗಿದೆ ಎಂದರು.

ವಿವಿಧ ಕ್ರೀಡೆಗಳಲ್ಲಿ ಭಾಗವಹಿಸಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳನ್ನು ಸನ್ಮಾನಿಸಲಾಯಿತು. ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಆಜಾದ್ ಮಹಮ್ಮದ್, ಈಗಿನ ಹೊಸ ಕ್ರೀಡಾ ನಿಯಮಗಳನ್ನು ಒಳಗೊಂಡಂತೆ ವಿವಿಧ ವಿಷಯಗಳ ಕುರಿತು ಮಾಹಿತಿ ನೀಡಿದರು. ಜೆ.ಬಿ. ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಎಂ.ಆರ್. ಪೂಜಾರ ವಂದಿಸಿದರು.

## ಮದ್ಯ ಸನ್ನುದಾರರ ಬೇಡಿಕೆಗಳನ್ನು ಈಡೇರಿಸಲು ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಮದ್ಯ ಮಾರಾಟಗಾರರ ಕ್ಷೇಮಾಭಿವೃದ್ಧಿ ಸಂಘದಿಂದ ರಾಜ್ಯದ ಎಲ್ಲ ವರ್ಗದ ಸನ್ನುದಾರರ ವಿವಿಧ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ಸಾಂಕೇತಿಕ ಧರಣಿ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಧ್ಯಕ್ಷ ಶಂಕರ ಹಾನಗಲ್, ಚಿಲ್ಲರೆ ಮದ್ಯ ಮಾರಾಟದ ಮೇಲೆ ಕನಿಷ್ಠ ಶೇ. 20 ಲಾಭಾಂಶ ನೀಡುವದು, ಹೆಚ್ಚುವರಿ ಅಬಕಾರಿ ಶುಲ್ಕವನ್ನು ಕಡಿಮೆ ಮಾಡುವದಷ್ಟೇ ಅಲ್ಲದೆ, ಸನ್ನದು ಆವರಣದಲ್ಲಿ ನಿಗದಿಪಡಿಸಿದ ನಿರ್ದಿಷ್ಟ ಸ್ಥಳ ಮತ್ತು ಮೊದಲೇ ತಯಾರಿಸಿದ ಆಹಾರಗಳನ್ನು ನೀಡಲು ಅವಕಾಶ ಮಾಡಿಕೊಡುವುದರಿಂದ




ಬಡವರ್ಗದ ಗ್ರಾಹಕರಿಗೆ ಸಹಾಯವಾಗುತ್ತದೆ ಎಂದರು.

ಇದರಿಂದ ಸಾರ್ವಜನಿಕ ಪ್ರದೇಶಗಳಲ್ಲಿ ಮದ್ಯಪಾನ ಮಾಡುವುದನ್ನು ತಡೆಗಟ್ಟುವ ಹಾಗೂ ಕಾಯ್ದೆ ಉಲ್ಲಂಘನೆ ತಡೆಯಬಹುದಾಗಿದೆ ಎಂದು ಸಂಘದ ಪದಾಧಿಕಾರಿಗಳು ಹೇಳಿದರಲ್ಲದೆ, ಈ ಎಲ್ಲ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಧ್ಯಕ್ಷ ಶಂಕರ ಹಾನಗಲ್, ಕಾರ್ಯಾಧ್ಯಕ್ಷ ಸಲೀಮ್ ಮೇಗಲಮನಿ, ಉಪಾಧ್ಯಕ್ಷ ಎಸ್.ಎಸ್. ಗೋಟೂರ, ಆಯ್.ಕೆ. ಹೊಸಮಠ, ಕಾರ್ಯದರ್ಶಿ ಮಂಜುನಾಥ ಆರ್. ಕಬಾಡಿ, ವಿಠ್ಠಲ ಎಮ್.ಖಟವಟೆ, ಸಹ ಕಾರ್ಯದರ್ಶಿ ಮಂಜು ಕಲಾಲ, ಆನಂದ ಎಸ್. ಚವ್ಹಾಣ, ಅಶೋಕ ಬೇವಿನಕಟ್ಟಿ, ಸುದರ್ಶನ ಹಾನಗಲ್, ನಾರಾಯಣ ಪವಾರ, ವಿನಾಯಕ ಕಬಾಡಿ, ವಿನಾಯಕ ನೆಲವಗಿ, ಮಹಾಂತೇಶ ಕಲಾಲ, ಲಿಂಗರಾಜ ಎಸ್.ಕೆ., ಎಸ್.ಎಫ್. ಕಬಾಡಿ, ಎಮ್.ಡಿ. ಹಬೀಬ, ರಾಘವೇಂದ್ರ ಕಲಾಲ, ಪಿ.ಜಿ. ಬದಿ, ವಿಕಾಸ ಚವ್ಹಾಣ, ದಯಾ ಪವಾರ, ಲೋಹಿತ ನೆಲವಗಿ, ಸುಧಾಕರ ಗೋಟೂರ, ಕುಮಾರ ಚಿತ್ರಗಾರ, ರವಿ ಹೊಸಪೇಟೆ ಸೇರಿದಂತೆ ಮುಂಡರಗಿ, ಶಿರಹಟ್ಟಿ, ರೋಣ, ನರಗುಂದ, ಗಜೇಂದ್ರಗಡ, ಗದಗ ಜಿಲ್ಲಾಮಟ್ಟದ ಸನ್ನದುದಾರರು ಉಪಸ್ಥಿತರಿದ್ದರು.

## ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ವಿಜಯ ಕರಡಿ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ


ಪಟ್ಟಣದ ಪುರಸಭೆಯ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ 19ನೇ ವಾರ್ಡ್‌ನ ಸದಸ್ಯ ವಿಜಯ ಕರಡಿ ಅವಿರೋಧ ಆಯ್ಕೆಯಾಗಿದ್ದಾರೆ.

ಮಾ.28ರ ವಿಶೇಷ ಸಾಮಾನ್ಯ ಸಭೆಯಲ್ಲಿ 11 ಜನ ಸ್ಥಾಯಿ ಸಮಿತಿ ಸದಸ್ಯರನ್ನು ಆಯ್ಕೆ ಮಾಡಲಾಗಿತ್ತು. ಶನಿವಾರ ಸ್ಥಾಯಿ ಸಮಿತಿ ಸದಸ್ಯರ ಸಭೆಯಲ್ಲಿ ಹಾಜರಿದ್ದ 8 ಸದಸ್ಯರ ಸಮ್ಮುಖದಲ್ಲಿ ಅಧ್ಯಕ್ಷ ಸ್ಥಾನಕ್ಕೆ ವಿಜಯ ಕರಡಿ ಅವರ ಹೆಸರನ್ನು ಹಿರಿಯ ಸದಸ್ಯ ರಾಜಣ್ಣ ಕುಂಬಿ ಸೂಚಿಸಿದರು. ಉಳಿದ ಸದಸ್ಯರು ಕೈ ಎತ್ತುವ ಮೂಲಕ ಈ ಆಯ್ಕೆಯನ್ನು ಅನುಮೋದಿಸಿದರು. 3 ಸದಸ್ಯರು ಗೈರಾಗಿದ್ದರು. ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಅವರು ಆಯ್ಕೆಯನ್ನು ಘೋಷಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಿಜಯ ಕರಡಿ, ಪುರಸಭೆ ಸರ್ವಸದಸ್ಯರು, ಊರಿನ ಹಿರಿಯರು, ಮುಖಂಡರು ಸೇರಿ ಸಾಮಾಜಿಕ ನ್ಯಾಯ ಕಲ್ಪಿಸುವ ನಿಟ್ಟಿನಲ್ಲಿ ನನಗೆ ಅವಕಾಶ ನೀಡಿದ್ದಾರೆ. ಪಟ್ಟಣದ ಅಭಿವೃದ್ಧಿ ಕಾರ್ಯದಲ್ಲಿ ಪಕ್ಷಾತೀತವಾಗಿ ಕಾರ್ಯನಿರ್ವಹಿಸುವುದಾಗಿ ಹೇಳಿದರು.

ಉಪಾಧ್ಯಕ್ಷ ಫಿರ್ದೋಶ್ ಆಡೂರ, ಸದಸ್ಯರಾದ ರಾಜೀವ ಕುಂಬಿ, ಜಯಕ್ಕ ಕಳ್ಳಿ, ಬಸವರಾಜ ಓದುನವರ, ಪ್ರವೀಣ ಬಾಳಿಕಾಯಿ, ರಾಮಪ್ಪ ಗಡದವರ, ಸಿಕಂದರ ಕಣಕೆ, ಮಂಜವ್ವ ದುರಗಣ್ಣವರ ಮುಖ್ಯಾಧಿಕಾರಿ ಮಹೇಶ ಹಡಪದ, ಸಿಬ್ಬಂದಿಗಳಿದ್ದರು.

## ವಿದ್ಯಾರ್ಥಿ ಜೀವನಕ್ಕೆ ಸಂಸ್ಕಾರವೂ ಮುಖ್ಯ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ವಿದ್ಯಾರ್ಥಿ ಜೀವನಕ್ಕೆ ಶಿಕ್ಷಣದಷ್ಟೇ ಸಂಸ್ಕಾರವೂ ಮುಖ್ಯ ಎಂದು ಸರಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ)ಯ ಪ್ರಧಾನ ಗುರು ಎಸ್.ಎಚ್. ಪೂಜಾರ ಹೇಳಿದರು.

ಅವರು ಪಟ್ಟಣದ ಆರ್.ಎಂ.ಎಸ್.ಎ ಪ್ರೌಢಶಾಲೆಯಲ್ಲಿ ಅತಿಥಿ ಶಿಕ್ಷಕರ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿ, ಹೆತ್ತ ತಂದೆ-ತಾಯಿ, ಕಲಿಸಿದ ಗುರುಗಳು, ಸಮಾಜದಲ್ಲಿನ ಗುರು-ಹಿರಿಯರನ್ನು ಗೌರವದಿಂದ ಕಾಣುವಂತೆ ಪಾಲಕರು ಚಿಕ್ಕಂದಿನಿಂದಲೇ ಉತ್ತಮ ಸಂಸ್ಕಾರ ನೀಡಬೇಕು. ಇದರಿಂದ ಉತ್ತಮ ಶಿಕ್ಷಣ ಪಡೆಯಲು ಸಾಧ್ಯವಾಗುತ್ತೆ ಎಂದರು.

ಸಹಶಿಕ್ಷಕ ನೂರಹ್ಮದ ನದಾಫ್ ಮಾತನಾಡಿ, ಬಸವರಾಜ ಗೌರಿಮನಿ ಹಾಗೂ ಪಂಪನಗೌಡರ ನಾಯಕ್ ಶಿಕ್ಷಕರು ನಮ್ಮ ಶಾಲೆಯ ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಯಾವುದೇ ರಜೆಯನ್ನು ಬಯಸದೇ ರಜಾ ದಿನಗಳಲ್ಲಿಯೂ ಎಸ್‌ಎಸ್‌ಎಲ್‌ಸಿ ಮಕ್ಕಳಿಗಾಗಿ ಶ್ರಮಿಸುವ ಮೂಲಕ ಶಾಲೆಯ ಅಚ್ಚುಮೆಚ್ಚಿನ ಶಿಕ್ಷಕರಾಗಿ ಸೇವೆ ಸಲ್ಲಿಸಿರುವುದು ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ಎಸ್.ವಿ. ತಿಮ್ಮಾಪೂರ, ಜಿ.ಆರ್. ಕುಂದರಗಿ, ವಿ.ಟಿ. ಅಂಗಡಿ, ಹಂಪನಗೌಡ ನಾಯಕ್, ಬಸವರಾಜ ಗೌರಿಮನಿ, ವಿ.ಡಿ. ಸಿದ್ದನಗೌಡರ, ಅಡುಗೆ ಸಿಬ್ಬಂದಿ ಫರಜಾನಾಬೇಗಂ ಅಕ್ಕಿ, ಆಭಿದಾಬೇಗಂ ನದಾಫ್, ಮಲಕವ್ವ ದೊಡ್ಡಮನಿ ಇದ್ದರು.

### ವರ್ಧಮಾನ ಸ್ಥಾನಕ ಭವನದಲ್ಲಿ ಜೈನಮುನಿಗಳಿಂದ ಧರ್ಮಬೋಧನೆ

# ಸಂಸ್ಕಾರ, ಸಂಸ್ಕೃತಿಯಿಂದ ದೇಶ ಸದೃಢ

■ ವಿಜಯಸಾಕ್ಷಿ ಸುದ್ದಿ, ಗದಗ

ಧರ್ಮ, ಸಂಸ್ಕಾರ, ಸಂಸ್ಕೃತಿ ಹಾಗೂ ನೈತಿಕ ಮೌಲ್ಯಗಳೊಂದಿಗೆ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಸರ್ವ ಸಮುದಾಯದವರು ಮುಂದಾಗಬೇಕು. ಅಂದಾಗ ಮಾತ್ರ ದೇಶ ಸದೃಢಗೊಳ್ಳುವದು ಎಂದು ಜೈನಮುನಿ, ರಾಷ್ಟ್ರಸಂತ, ಪೂಜ್ಯ ಕಮಲಮುನಿ ಹೇಳಿದರು.

ಅವರು ಶನಿವಾರ ಗದುಗಿನ ವರ್ಧಮಾನ ಸ್ಥಾನಕ ಭವನದಲ್ಲಿ ಜೈನ ಸಮಾಜ ಬಾಂಧವರಿಗೆ ಏರ್ಪಡಿಸಿದ್ದ ಧರ್ಮಬೋಧನೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ದಯಪಾಲಿಸಿದರು.

ಸದೃಢ ಯುವಕರಿಂದ ಸದೃಢ ಸಮಾಜ, ಸದೃಢ ದೇಶ ನಿರ್ಮಾಣಗೊಳ್ಳುವದು. ಯುವ ಜನಾಂಗ ದುಶ್ಚಟಗಳಿಂದ, ಮಾದಕ ವಸ್ತುಗಳ ಸೇವನೆಯಿಂದ ದೂರವಿದ್ದು ಉತ್ತಮ ಆರೋಗ್ಯ ಕಾಯ್ದುಕೊಳ್ಳಬೇಕು. ಪಂಚಸೂತ್ರಗಳಾದ ವೈಚಾರಿಕತೆ, ಧಾರ್ಮಿಕತೆ, ನಶಾಮುಕ್ತ ಸಮಾಜ ನಿರ್ಮಾಣ, ದೇಶಭಕ್ತಿ, ಪರಿಸರ ಸಂರಕ್ಷಣೆಗೆ ಮುಂದಾಗಬೇಕೆಂದರು.




ಗೋವುಗಳನ್ನು ಸಂರಕ್ಷಿಸುವ, ಪೂಜಿಸುವ ಕಾರ್ಯ ನಡೆಯಬೇಕು. ಗೋವುಗಳಿಂದಾಗಿ ಲಭ್ಯವಾಗುವ ಉತ್ಕೃಷ್ಟವಾದ ಹಾಲು, ಮೊಸರು, ಬೆಣ್ಣೆ, ತುಪ್ಪ ನಮ್ಮ ಆರೋಗ್ಯವನ್ನು ಸದೃಢಗೊಳಿಸುವದು ಅಷ್ಟೇ ಅಲ್ಲ ಸಾವಯವ ಕೃಷಿಗೆ ಹೆಚ್ಚು ಅನುಕೂಲವೂ ಇದೆ. ಕೃಷಿ ಪ್ರಧಾನವಾದ ಭಾರತದಲ್ಲಿ ಸಾವಯವ ಕೃಷಿಗೆ ಹೆಚ್ಚಿನ ಮಹತ್ವ ನೀಡಬೇಕು. ರಾಸಾಯನಿಕ ಗೊಬ್ಬರ ಬಳಕೆಯಿಂದಾಗಿ ಭೂಮಿ ತನ್ನ ಫಲವತ್ತತೆಯನ್ನು ಕಳೆದುಕೊಳ್ಳುತ್ತಿದೆ. ಬರಲಿರುವ ದಿನಗಳಲ್ಲಿ ಪರಿಶುದ್ಧ ಆಹಾರಕ್ಕಾಗಿ ಪರಿತಪಿಸುವಂತೆ ಆಗಬಾರದು ಎಂದರು.

ಪ್ಲಾಸ್ಟಿಕ್ ಮತ್ತು ತಂಬಾಕು ಉತ್ಪಾದನಾ ಹಂತದಲ್ಲೇ ನಿಷೇಧಿಸಬೇಕೇ ಹೊರತು ಮಾರುಕಟ್ಟೆಗೆ ಬಂದ ನಂತರ ನಿಷೇಧಿಸುವುದಲ್ಲ. ತಂಬಾಕು, ಗುಟ್ಕಾ, ಧೂಮಪಾನ, ಮದ್ಯಪಾನದಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಕಾರಣ ಪಾಲಕ-ಪೋಷಕರು ತಮ್ಮ ಮಕ್ಕಳ ಹವ್ಯಾಸ, ಚಟಗಳನ್ನು ಗಮನಿಸಬೇಕು. ಇಂತಹ ಚಟಗಳಿಂದಾಗಿ ಕೇವಲ ವ್ಯಕ್ತಿಯ ಆರೋಗ್ಯವಷ್ಟೇ ಅಲ್ಲದೆ ಕುಟುಂಬ, ದೇಶದ ಆರೋಗ್ಯ, ಆರ್ಥಿಕತೆಯ ಮೇಲೆಯೂ ಪರಿಣಾಮ ಬೀರುವದು ಎಂದು ಪೂಜ್ಯ ಕಮಲಮುನಿಗಳು ಹೇಳಿದರು.

ಪರಿಶ್ರಮದ ದುಡಿಮೆಯ ಫಲವು ಉಳಿತಾಯವಾಗಿ ಭವಿಷ್ಯದಲ್ಲಿ ಕಷ್ಟಕಾಲಕ್ಕೆ ಸದ್ವಿನಿಯೋಗ ಆಗಬೇಕು. ಯಾವುದೇ ಕಾರಣಕ್ಕೆ ಅನಾವಶ್ಯಕ ಹಾಗೂ ದುಂದುವೆಚ್ಚ ಬೇಡ. ಆಡಂಬರ ಹಾಗೂ ಐಷಾರಾಮಿ ಜೀವನ, ಅನಾವಶ್ಯಕ ಇಂಧನ ಬಳಕೆ, ವಿದ್ಯುತ್‌ಚ್ಛಕ್ತಿ ಬಳಕೆ, ಸಿಡಿಮದ್ದು, ಹೋಳಿ ಬಣ್ಣ ಎಂದು ಹಣ ಖರ್ಚು ಮಾಡುವ ಬದಲು ಇದೇ ಹಣವನ್ನು ಮಾನವ ಕಲ್ಯಾಣಕ್ಕಾಗಿ, ಗೋವು ಸಂರಕ್ಷಣೆಗಾಗಿ ಬಳಕೆ ಮಾಡಿ ಎಂದರು.

ಈ ಸಂದರ್ಭದಲ್ಲಿ ಜೈನ ಮುನಿಗಳಾದ ಘನಶ್ಯಾಮ್‌ಮುನಿ, ಕೌಶಲಮುನಿ, ಅಕ್ಷತ್‌ಮುನಿ, ಸಕ್ಷಮ್‌ಮುನಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಜೈನ ಸಮಾಜದ ಗುರು-ಹಿರಿಯರು, ಮಹಿಳೆಯರು ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

## ವಕ್ಫ್ ತಿದ್ದುಪಡಿ ಮಸೂದೆ ಮುಸ್ಲಿಮರ ವಿರುದ್ಧವಾಗಿಲ್ಲ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಕ್ಫ್ ತಿದ್ದುಪಡಿ ಮಸೂದೆ ಮುಸ್ಲಿಮರ ವಿರುದ್ಧವಾಗಿಲ್ಲ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ವಕ್ಫ್ ತಿದ್ದುಪಡಿ ಮಸೂದೆ ಮುಸ್ಲಿಮರ ವಿರುದ್ಧವಾಗಿಲ್ಲ. ಕಾಂಗ್ರೆಸ್ ನಾಯಕರಿಗೆ ರಾಜಕೀಯವಾಗಿ ಹಿನ್ನಡೆ ಆಗುತ್ತೆ ಅಂತ ಮಸೂದೆಗೆ ವಿರೋಧ ಮಾಡುತ್ತಿದ್ದಾರೆ. ಸೋನಿಯಾ ಗಾಂಧಿ ಅವರಿಗೆ ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಲ್ಲ. ರಾಜಾ ಮಾತೆ ಸುಪುತ್ರ ರಾಹುಲ್ ಗಾಂಧಿ ಈ ಹಿಂದೆ ಬಿಲ್ ಹರಿದು ಹಾಕಿದ್ದಾರೆ. ಅವರು ಈ ಬಿಲ್ ಬಗ್ಗೆ ಮಾತನಾಡುತ್ತಾರೆ.

## ಕ್ರೀಡೆಯಿಂದ ದೈಹಿಕ, ಮಾನಸಿಕ ಅಭಿವೃದ್ಧಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ದೈಹಿಕ ಹಾಗೂ ಮಾನಸಿಕ ಅಭಿವೃದ್ಧಿಗಾಗಿ ಕ್ರೀಡೆಯಲ್ಲಿ ಭಾಗವಹಿಸುವುದು ಅವಶ್ಯಕವಾಗಿದೆ ಎಂದು ಬಸವರಾಜ ಸುಂಕಾಪೂರ ಹೇಳಿದರು.

ಅವರು ಪಟ್ಟಣದ ಸಿದ್ದೇಶ್ವರ ದೇವಸ್ಥಾನ ಆವರಣದಲ್ಲಿ ಸಿದ್ದೇಶ್ವರ ಯುವಕ ಮಂಡಳ, ಡಿಪಿಇಪಿ ಶಾಲೆ ಹಾಗೂ



ಆರ್‌ಎಂಎಸ್‌ಎ ಪ್ರೌಢಶಾಲೆಯ ಸಂಯುಕ್ತ ಆಶ್ರಯದಲ್ಲಿ 17 ವರ್ಷದೊಳಗಿನ ಬಾಲಕ ಹಾಗೂ ಬಾಲಕಿಯರ ಬೇಸಿಗೆ ಕ್ರೀಡಾ ತರಬೇತಿ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಮಕ್ಕಳು ದೈಹಿಕ ಹಾಗೂ ಮಾನಸಿಕವಾಗಿ ಸದೃಢರಾಗಲು ಕ್ರೀಡಾಕೂಟದಲ್ಲಿ ಭಾಗವಹಿಸುವುದು ಮುಖ್ಯವಾಗಿದೆ. ಮಕ್ಕಳು ಪ್ರಾಥಮಿಕ ಹಂತದಲ್ಲೇ ಎಲ್ಲಾ ಕ್ರೀಡೆಗಳಲ್ಲಿ ಭಾಗವಹಿಸಬೇಕು ಎಂದರು.

ಗಂಗಪ್ಪ ಸುಂಕಾಪೂರ, ಮಾಹಾದೇವಪ್ಪ ಹುಬ್ಬಳ್ಳಿ, ಮಾಹಾಂತೇಶ ನೀಲಗುಂದ, ಹೊನ್ನಪ್ಪ ನೀಲಗುಂದ, ಮಾಹಾಂತೇಶ ಕೆಂಚನಾಯ್ಕರ್, ಮಾಹಾದೇವಪ್ಪ ಮಾನೇಗಾರ, ವಿ.ಡಿ. ಸಿದ್ದನಗೌಡರ, ಎಸ್.ಎಚ್. ಪೂಜಾರ, ಪಂಪನಗೌಡ ನಾಯಕ್, ಬಸವರಾಜ ಗೌರಿಮನಿ, ನೂರಹ್ಮದ ನದಾಫ್, ದೈಹಿಕ ಶಿಕ್ಷಕ ವಿ.ಟಿ. ಅಂಗಡಿ ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka